# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 75 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 22–09–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 75 | Title- Code: KARKAN 28269 | Chitradurga | Date: 22-09-2023 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವರವಿನಾರಹಟ್ಟಿ ಅಗ್ನಿ ಆಕಸ್ಮಿಕ ಪ್ರಕರಣ: ಜಪಾನಂದ ಸ್ವಾಮೀಜಿಯಿಂದ ನೆರವು 2

ತಮಿಳುನಾಡಿಗೆ ನೀರು: ಸಿಎಂ ನಿರ್ಧಾರಕ್ಕೆ ಬದ್ಧ: ಸಚಿವ ಮಧು ಬಂಗಾರಪ್ಪ 3

ಭದ್ರಾ: ಆನ್ ಅಂಡ್ ಆಫ್‌ನಲ್ಲ ಮುಂಗಾರು ಹಂಗಾಮಿಗೆ ನೀರು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್


### ಮೊರಾರ್ಜಿ ಶಾಲೆ ಗೋಡೆ ಕುಸಿದು ವಿದ್ಯಾರ್ಥಿ ಸಾವು

ರಾಮನಗರ: ಮೊರಾರ್ಜಿ ವಸತಿ ಶಾಲೆ ಗೋಡೆ ಕುಸಿದು ವಿದ್ಯಾರ್ಥಿ ಸಾವನ್ನಪ್ಪಿದ ಘಟನೆ ಹೊಸೂರು ಗೊಲ್ಲಳ್ಳಿಯಲ್ಲಿ ನಡೆದಿದೆ. ಬೆಳಗ್ಗೆ ಸ್ನಾನಕ್ಕೆ ತೆರಳಿದ್ದಾಗ ಈ ಘಟನೆ ನಡೆದಿದೆ. ವಿದ್ಯಾರ್ಥಿ ಕೌಶಿಕ್ (12) ಮೃತ ದುರ್ದೈವಿ. ನೀರು ಸಂಗ್ರಹಕ್ಕೆ ತಡೆಗೋಡೆ ನಿರ್ಮಿಸಲಾಗಿತ್ತು. ನೀರಿನ ಪ್ರಮಾಣ ತಡೆಯಲಾಗದೇ ಗೋಡೆ ಕುಸಿದಿದೆ.

### ರಾಜ್ಯ ಬಿಜೆಪಿ ಕಚೇರಿಯಲ್ಲಿ ಚುನಾವಣಾ ಸಿದ್ಧತಾ ಸಭೆ

ಬೆಂಗಳೂರು ಪದವೀಧರ ಕ್ಷೇತ್ರದ ಉಪಚುನಾವಣೆ ಹಿನ್ನೆಲೆ ಮಲ್ಲೇಶ್ವರಂನ ರಾಜ್ಯ ಬಿಜೆಪಿ ಕಚೇರಿಯಲ್ಲಿ ಚುನಾವಣಾ ಸಿದ್ಧತಾ ಸಭೆ ನಡೆಸಲಾಗುತ್ತಿದೆ. ಶಾಸಕ ಆರ್.ಅಶೋಕ್ ನೇತೃತ್ವದಲ್ಲಿ ನಡೆಯುತ್ತಿರುವ ಸಭೆಯಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಎನ್.ರವಿಕುಮಾರ್, ಸಿದ್ಧರಾಜು, ಬೆಂಗಳೂರು ನಗರ ಜಿಲ್ಲಾ ಬಿಜೆಪಿ ಅಧ್ಯಕ್ಷ, ಪದಾಧಿಕಾರಿಗಳು ಭಾಗಿಯಾಗಿದ್ದಾರೆ. ಬಿಜೆಪಿ ಎಂಎಲ್‌ಸಿ ಪುಟ್ಟಣ್ಣ ರಾಜೀನಾಮೆಯಿಂದ ತೆರವಾಗಿರುವ ಕ್ಷೇತ್ರ ಇದಾಗಿದೆ.

### ಮಿತ್ರ ಪಕ್ಷ ಡಿಎಂಕೆ ಜೊತೆ ಕಾಂಗ್ರೆಸ್ ಸರ್ಕಾರ ಮಾತನಾಡಬೇಕು: ಯಡಿಯೂರಪ್ಪ



ತಮಿಳುನಾಡಿಗೆ ಮತ್ತೆ ನೀರು ಹರಿಸಲು ಸುಪ್ರೀಂಕೋರ್ಟ್ ಆದೇಶ ಹೊರಡಿಸಿದ ಬಗ್ಗೆ ಬೆಂಗಳೂರಿನಲ್ಲಿ ಮಾತನಾಡಿದ ಮಾಜಿ ಸಿಎಂ ಯಡಿಯೂರಪ್ಪ, ಮಿತ್ರ ಪಕ್ಷ ಡಿಎಂಕೆ ಜೊತೆ ಕಾಂಗ್ರೆಸ್ ಸರ್ಕಾರ ಮಾತನಾಡಬೇಕು. ಡಿಎಂಕೆ ಜೊತೆ ಚರ್ಚಿಸಿ ಕಾವೇರಿ ನದಿ ಸಮಸ್ಯೆ ಬಗೆಹರಿಸಲು ಪ್ರಯತ್ನಿಸಲಿ. ಕೇಂದ್ರ ಮಧ್ಯ ಪ್ರವೇಶ ಮಾಡುವಂತೆ ಒತ್ತಾಯ ಮಾಡುವುದು ಸರಿಯಲ್ಲ. ತಮಿಳುನಾಡಿಗೆ ನೀರು ಬಿಟ್ಟು ಸರ್ಕಾರ ತಪ್ಪು ಮಾಡಿದೆ ಎಂದರು.

### ವಿಧಾನಸೌಧ ಮುತ್ತಿಗೆ ಹಾಕಲು ಹೊರಟ ಕರವೇ ಕಾರ್ಯಕರ್ತರು

ಸುಪ್ರೀಂಕೋರ್ಟ್ ಆದೇಶದ ಬೆನ್ನಲ್ಲೇ ಕಾವೇರಿ ನೀರು ಬಿಡದಂತೆ ಆಗ್ರಹಿಸಿ ವಿಧಾನಸೌಧ ಮುತ್ತಿಗೆ ಹಾಕಲು ಕರವೇ ಕಾರ್ಯಕರ್ತರು ಹೊರಟಿದ್ದಾರೆ. ಕರವೇ ಅಧ್ಯಕ್ಷ ನಾರಾಯಣ ಗೌಡ ನೇತೃತ್ವದಲ್ಲಿ ಹೊರಟ ರ್ಯಾಲಿಯನ್ನು ಮೌರ್ಯ ಸರ್ಕಲ್ ಬಳಿ ಬ್ಯಾರಿಕೇಡ್ ಹಾಕಿ ರ್ಯಾಲಿ ತಡೆಯಲು ಪೊಲೀಸರು ಸಿದ್ಧತೆ ನಡೆಸಿದ್ದಾರೆ. ಎಲ್ಲರನ್ನೂ ವಶಕ್ಕೆ ಪೊಲೀಸರ ಪ್ಲಾನ್ ಹಾಕಲಾಗಿದೆ. ಸದ್ಯ ನಾರಾಯಣ ಗೌಡರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕಾರ್ಯಕರ್ತರನ್ನೂ ವಶಕ್ಕೆ ಪಡೆಯಲು ಆರಂಭಿಸಿದ್ದಾರೆ.

### ಕಾಂಗ್ರೆಸ್ ವಿರುದ್ಧ ಸಿಟಿ ರವಿ ವಾಗ್ದಾಳಿ

ತಮಿಳುನಾಡಿಗೆ ಮತ್ತೆ ನೀರು ಹರಿಸಲು ಸುಪ್ರೀಂಕೋರ್ಟ್ ಆದೇಶ ಹೊರಡಿಸಿದ ವಿಚಾರವಾಗಿ ಬೆಂಗಳೂರಿನಲ್ಲಿ ಮಾತನಾಡಿದ ಬಿಜೆಪಿಯ ಮಾಜಿ ಶಾಸಕ ಸಿ.ಟಿ.ರವಿ, ಸುಪ್ರೀಂಕೋರ್ಟ್ ತೀರ್ಪು ಗಾಯದ ಮೇಲೆ ಬರೆ ಎಳೆದಂತಾಗಿದೆ. ತಮಿಳುನಾಡು ಕೇಳುವುದಕ್ಕಿಂತ ಮೊದಲೇ ಕರ್ನಾಟಕ ನೀರು ಬಿಟ್ಟಿದೆ. ತಮಿಳುನಾಡಿಗೆ ರಾಜ್ಯ ಸರ್ಕಾರ ಯಾರ ಭಯದಿಂದ ನೀರು ಬಿಟ್ಟಿದೆ. ರಾಜ್ಯ ಸರ್ಕಾರಕ್ಕೆ ಡಿಎಂಕೆ ಬೆದರಿಕೆ ಹಾಕಿರಬಹುದು. ನಿಮ್ಮ ಋ.ಓ.ಆ.ಋ.ಂದ ಭಾಗ ಆಗಬೇಕೆಂದರೆ ನೀರು ಬಿಡಿ ಎಂದಿರಬಹುದು ಅಥವಾ ನಿಮ್ಮ ಹೈಕಮಾಂಡ್ ನೀರು ಬಿಡಲು ಸೂಚನೆ ನೀಡಿರಬಹುದು. ನೀರು ಬಿಟ್ಟು ಸಭೆ ಕರೆಯುವ ಹೊಸ ಸಂಪ್ರದಾಯ ಶುರು ಮಾಡಿದ್ದೀರಿ ಎಂದರು.

### ಸೆ. 25 ರಂದು ಹಿರಿಯೂರಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಜನತಾದರ್ಶನ

# ಸಾರ್ವಜನಿಕರಿಂದ ಅಹವಾಲು ಸ್ವೀಕಾರ, ಸರ್ಕಾರಿ ಸೌಲಭ್ಯ ವಿತರಣೆ: ಜಿಲ್ಲಾಧಿಕಾರಿ

» **ಚಿತ್ರದುರ್ಗ**



ಮುಖ್ಯಮಂತ್ರಿಗಳ ಆಶಯದಂತೆ ಪ್ರತಿ ತಿಂಗಳು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜನತಾದರ್ಶನ ಆಯೋಜಿಸುವಂತೆ ಸೂಚನೆ ನೀಡಿದ್ದು, ಅದರಂತೆ, ಮೊದಲ ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮ ಸೆ. 25 ರಂದು ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಹಿರಿಯೂರಿನಲ್ಲಿ ಆಯೋಜಿಸಲಾಗುವುದು, ಇದು ಪ್ರಥಮ ಕಾರ್ಯಕ್ರಮವಾಗಿರುವುದರಿಂದ ವಿಜೃಂಭಣೆಯ ಚಾಲನೆ ದೊರಕಿಸಲು ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಸೂಚನೆ ನೀಡಿದರು.

ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮ ಆಯೋಜನೆ ಕುರಿತಂತೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಲಾದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಲು, ಸ್ಥಳೀಯವಾಗಿಯೇ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ, ಅವುಗಳಿಗೆ ಕಾಲಮಿತಿಯಲ್ಲಿ ಪರಿಹಾರ ಒದಗಿಸುವಂತೆ ಮಾಡಲು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ಒಂದೊಂದು ತಾಲ್ಲೂಕಿನಲ್ಲಿ ಜನತಾದರ್ಶನ ಏರ್ಪಡಿಸುವಂತೆ ಹಾಗೂ ಪ್ರತಿ ಹದಿನೈದು ದಿನಗಳಿಗೆ ಒಮ್ಮೆ ಜಿಲ್ಲಾಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಕಾರ್ಯಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ. ಅದರನ್ವಯ, ಜಿಲ್ಲೆಯಲ್ಲಿ ಪ್ರಸಕ್ತ ಸರ್ಕಾರದ ಮೊದಲ ಜಿಲ್ಲಾ ಮಟ್ಟದ ಜನತಾದರ್ಶನ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರ ಅಧ್ಯಕ್ಷತೆಯಲ್ಲಿ ಇದೇ ಸೆ. 25 ರಂದು ಹಿರಿಯೂರಿನಲ್ಲಿ ಆಯೋಜಿಸಲಾಗುತ್ತಿದೆ. ಕಾರ್ಯಕ್ರಮವನ್ನು ಹಿರಿಯೂರಿನ ಹುಳಿಯಾರು ರಸ್ತೆಯಲ್ಲಿರುವ ತಹಾ ಪ್ಯಾಲೇಸ್ ನಲ್ಲಿ ಏರ್ಪಡಿಸಲು ಉದ್ದೇಶಿಸಲಾಗಿದೆ. ಜಿಲ್ಲಾ ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮಕ್ಕೆ ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು. ಜನತಾದರ್ಶನ ಕಾರ್ಯಕ್ರಮ ಅಂಗವಾಗಿ ಜಿಲ್ಲೆಯ ಯಾವುದೇ ತಾಲ್ಲೂಕಿನ ಸಾರ್ವಜನಿಕರು ತಮ್ಮ ಅಹವಾಲುಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಇಲ್ಲಿ ಸಲ್ಲಿಸಬಹುದಾಗಿದೆ. ಅಧಿಕಾರಿಗಳು ಸ್ಥಳದಲ್ಲಿ ಅಗತ್ಯ ಕೌಂಟರ್ ಗಳನ್ನು ತೆರೆದು ಸಾರ್ವಜನಿಕರ ಅರ್ಜಿಗಳನ್ನು ಪಡೆದುಕೊಂಡು, ಸ್ವೀಕೃತಿ ಪತ್ರ ನೀಡಲು ಕ್ರಮ ಕೈಗೊಳ್ಳಬೇಕು, ಅಲ್ಲದೆ ಸಾರ್ವಜನಿಕ ಕುಂದುಕೊರತೆ ಸ್ವೀಕೃತಿ ಪೋರ್ಟಲ್‌ನಲ್ಲಿ ದಾಖಲಿಸಿ, ಅರ್ಜಿಗಳ ಸಮರ್ಪಕ ವಿಲೇವಾರಿಗೆ ಕ್ರಮ ವಹಿಸಬೇಕು. ವಿವಿಧ ಮಾಸಾಶನಗಳಿಗೆ ಅರ್ಜಿ ಸಲ್ಲಿಸುವವರಲ್ಲಿ, ಯೋಜನೆ ಮಂಜೂರು ಮಾಡಲು ಅರ್ಹರಿದ್ದಲ್ಲಿ, ಸ್ಥಳದಲ್ಲಿಯೇ ಮಂಜೂರಾತಿ ನೀಡಿ, ಇದೇ ಸಂದರ್ಭದಲ್ಲಿಯೇ ಫಲಾನುಭವಿಗೆ ಮಂಜೂರಾತಿಪತ್ರವಿತರಣೆಮಾಡಲುಕ್ರಮ ವಹಿಸಬೇಕು. ಇದು ಪ್ರಸಕ್ತ ಸರ್ಕಾರದಿಂದ ಏರ್ಪಡಿಸಲಾಗುತ್ತಿರುವ ಮೊದಲ ಜನತಾದರ್ಶನ ಕಾರ್ಯಕ್ರಮವಾಗಿದ್ದು, ವಿಜೃಂಭಣೆಯಿಂದ ಕಾರ್ಯಕ್ರಮಕ್ಕೆ ಚಾಲನೆ ದೊರಕುವಂತಾಗಲು, ವಿವಿಧ ಇಲಾಖೆಗಳುವಸ್ತುಪ್ರದರ್ಶನಮಳಿಗೆಗಳನ್ನು ತೆರೆದು ನಾನಾ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ಒದಗಿಸಬೇಕು. ಆರೋಗ್ಯ, ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳು ಸೇರಿದಂತೆ ವಿವಿಧ ಇಲಾಖೆಗಳು ವಸ್ತುಪ್ರದರ್ಶನ ಆಯೋಜಿಸಬೇಕು. ಅಲ್ಲದೆ ವಿವಿಧ ಯೋಜನೆಗಳಡಿ ಸರ್ಕಾರಿ ಸೌಲಭ್ಯಗಳು, ಮಂಜೂರಾತಿ ಪತ್ರಗಳನ್ನು ಇದೇ ಸಂದರ್ಭದಲ್ಲಿ ಫಲಾನುಭವಿಗಳಿಗೆ ವಿತರಿಸಲುಅಗತ್ಯಸಿದ್ಧತೆಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಇದು ಸರ್ಕಾರಿ ಕಾರ್ಯಕ್ರಮವಾಗಿದ್ದು, ಸಮಾರಂಭದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯವರು ಅಗತ್ಯ ಮುಂಜಾಗ್ರತೆ ವಹಿಸಬೇಕು, ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಲಭ್ಯ ಒದಗಿಸಬೇಕು, ಈ ಕುರಿತು ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ನಿರ್ದೇಶನ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಹಿರಿಯೂರು ತಹಸಿಲ್ದಾರ್ ರಾಜೇಶ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕುಗಳ ತಹಸಿಲ್ದಾರರು ಭಾಗಹಿಸಿದ್ದರು

## ಇಂಡಿಯನ್ ಸ್ವಚ್ಛತಾ ಲೀಗ್ ಸೀಸನ್–2ಗೆ ಚಾಲನೆ


» **ಹೊಳಲ್ಕೆರ**



ಕೇಂದ್ರ ಸರ್ಕಾರದ ಸೂಚನೆಯಂತೆ ಹೊಳಲ್ಕೆರೆ ಪಟ್ಟಣದಲ್ಲಿ ಇಂಡಿಯನ್ ಸ್ವಚ್ಛತಾ ಲೀಗ್ ಸೀಸನ್–2 ಅಭಿಯಾನದಡಿ ಶಾಸಕ ಡಾ.ಎಂ.ಚಂದ್ರಪ್ಪ ಶಾಸಕರು ಅವರ ಅಧ್ಯಕ್ಷತೆಯಲ್ಲಿ ಹೊಳಲ್ಕೆರೆ ಪಟ್ಟಣದ ಪ್ರಸಿದ್ಧ ಧಾರ್ಮಿಕ ಸ್ಥಳ ಹಾಗೂ ಪ್ರವಾಸಿ ತಾಣಗಳಾದ ಗಣಪತಿ ದೇವಸ್ಥಾನ ಹಾಗೂ ಶಿವನಕರ ಸ್ವಚ್ಛಕ ಹಾಗೂ ಗಣಪತಿ ದೇವಸ್ಥಾನದಿಂದ ಶಿವನಕೆರೆಯವರೆಗೆ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಹೊಳಲ್ಕೆರೆ ಪುರಸಭೆಯು ಈ ಹಿಂದೆ ಇಂಡಿಯನ್ ಸ್ವಚ್ಛತಾ ಲೀಗ್ ಸೀಸನ್–1 ರಲ್ಲಿ ಭಾಗವಹಿಸಿ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿಯನ್ನು ಗಳಿಸಿದ್ದು ಮತ್ತೊಮ್ಮೆ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿಯನ್ನು ಗಳಿಸುವ ಸಲುವಾಗಿ ಹೊಳಲ್ಕೆರೆ ಪಟ್ಟಣದಲ್ಲಿ ಎಲ್ಲಾ ಇಲಾಖೆಯವರು, ಸಂಘ ಸಂಸ್ಥೆಗಳು ಒಗ್ಗೂಡಿ ಗಣಪತಿ ದೇವಸ್ಥಾನ ಹಾಗೂ ಶಿವನಕೆರೆ ಸ್ವಚ್ಛತೆ ಕೆಲಸಗಳನ್ನು ನೆರವೇರಿಸಲಾಯಿತು

## ಶಕ್ತಿಗೆ ಶತಕದ ಸಂಭ್ರಮ

**ಬೆಂಗಳೂರು:** ಉಜ್ವಲ ಭವಿಷ್ಯದ ಕನಸು ಕಟ್ಟಿಕೊಂಡು ಶಾಲೆಗೆ ಹೋಗುವ ಪ್ರತಿ ಹೆಣ್ಣುಮಗಳು, ಕುಟುಂಬದ ಹೊಣೆ ಯನ್ನು ತನ್ನ ಹೆಗಲ ಮೇಲೆ ಹೊತ್ತು ನಿತ್ಯ ದುಡಿಮೆಗೆ ತೆರಳುವ ನಾಡಿನ ಅಕ್ಕ ತಂಗಿಯರು, ವೈದ್ಯಕೀಯ ಚಿಕಿತ್ಸೆಗಾಗಿ ಪ್ರಯಾಣ ಬೆಳೆಸುವ ಬಡತಾಯಂದಿರ ಬದುಕಿನ ಬವಣೆ ನಮ್ಮ ಶಕ್ತಿ ಯೋಜನೆಯ ಹಿಂದಿರುವ ಪ್ರೇರಕ ಶಕ್ತಿ. ತಾವು ಸದೃಢರಾಗುವ ಜೊತೆಗೆ ಬಲಿಷ್ಠ ಸಮಾಜದ ಆಧಾರ ಸ್ತಂಭಗಳಾಗಬೇಕು ಎಂಬ ನಮ್ಮ ಉದ್ದೇಶವನ್ನು ಈಡೇರಿಸುವ ದಿಕ್ಕಿನಲ್ಲಿ ಶಕ್ತಿ ಯೋಜನೆ ಮುಂದಡಿಯಿಡುತ್ತಿದೆ.




ಶಕ್ತಿ ಯೋಜನೆ ಜಾರಿಗೊಂಡ ಈ ನೂರು ದಿನಗಳಲ್ಲಿ ಅಸಂಖ್ಯ ತಾಯಂದಿರಲ್ಲಿ ನೆಮ್ಮದಿಯ ನಿಟ್ಟುಸಿರಿಗೆ, ಲಕ್ಷಾಂತರ ವಿದ್ಯಾರ್ಥಿನಿಯರ ಮುಖದಲ್ಲಿ ಮಂದಹಾಸಕ್ಕೆ ಕಾರಣವಾಗಿದೆ ಎಂಬುದು ಯೋಜನೆ ಜಾರಿಗೆ ಕೊಟ್ಟ ನನಗೆ ಅತ್ಯಂತ ಖುಷಿಯ ಸಂಗತಿ.

» **ಸಿದ್ದರಾಮಯ್ಯ**

**ಪ್ರಮುಖ ಸುದ್ದಿ**

# ಕಾವೇರಿ ನೀರು ಹರಿಸಲು ಸುಪ್ರೀಂ ಕೋರ್ಟ್ ಆದೇಶ

» **ನವದೆಹಲಿ**





- **ಕಾವೇರಿ ಪ್ರಾಧಿಕಾರದ ಆದೇಶಕ್ಕೆ ತಡೆ ನೀಡಲು ಸುಪ್ರೀಂ ನಕಾರ**
- **ಪ್ರಾಧಿಕಾರದ ಆದೇಶದಲ್ಲಿ ಮಧ್ಯ ಪ್ರವೇಶಿಸಲ್ಲ ಸುಪ್ರೀಂ**
- **ನ್ಯಾಯಾಲಯದಲ್ಲಿ ರ್‍ನಾಟಕಕ್ಕೆ ಹಿನ್ನಡೆ**
- **ತಮಿಳುನಾಡಿಗೆ 15 ದಿನ 5 ಸಾವಿರ ಕ್ಯೂಸೆಕ್ ನೀರು ಹರಿಸುವ ಅನಿವರ್ಯತೆ ಸಂಕಷ್ಟ**

ಮುಂದಿನ 15 ದಿನಗಳ ಕಾಲ ತಮಿಳುನಾಡಿಗೆ ಪ್ರತಿನಿತ್ಯ 5 ಸಾವಿರ ಕ್ಯೂಸೆಕ್ ನೀರನ್ನು ಹರಿಸಬೇಕೆಂಬ ಕಾವೇರಿ ನೀರು ನರ್ವಹಣಾ ಸಮಿತಿಯ ಆದೇಶಕ್ಕೆ ಸುಪ್ರೀಂಕರ್ಟ್ ತಡೆ ನೀಡಲು ನಿರಾಕರಿಸಿದೆ. ಈ ವಿಚಾರದಲ್ಲಿ ಮಧ್ಯ ಪ್ರವೇಶಿಸುವುದಿಲ್ಲ. ನಿರಾಕರಿಸಿ, ಕಾವೇರಿ ನೀರು ನರ್ವಹಣಾ ಪ್ರಾಧಿಕಾರದ ಆದೇಶ ಪಾಲನೆಗೆ ನರ್ದೇಶನ ನೀಡಿದೆ. ಸುಪ್ರೀಂಕರ್ಟ್‌ನ ಈ ಆದೇಶ ರ್‍ನಾಟಕಕ್ಕೆ ಆಘಾತ ತಂದಿದೆ. ಕಾನೂನು ಹೋರಾಟದಲ್ಲೂ ಹಿನ್ನಡೆಯಾಗಿದೆ.

ತಮಿಳುನಾಡಿಗೆ ಪ್ರತಿದಿನ 5 ಸಾವಿರ ಕ್ಯೂಸೆಕ್ ನೀರು ಹರಿಸಬೇಕು ಎಂಬ ಕಾವೇರಿ ನರ್ವಹಣಾ ಪ್ರಾಧಿಕಾರ ಹೊರಡಿಸಿರುವ ಆದೇಶಕ್ಕೆ ತಡೆಯಾಜ್ಞೆ ನೀಡಬೇಕು ಎಂಬ ರಾಜ್ಯದ ಮನವಿಯನ್ನು ರ್‍ವೋಚ್ಚ ನ್ಯಾಯಾಲಯ ಮಾನ್ಯ ಮಾಡಿಲ್ಲ. ಹಾಗೆಯೇ, ಉಭಯ ರಾಜ್ಯಗಳ ರೈತರು ತಮ್ಮ ವಾದವನ್ನು ಆಲಿಸುವಂತೆ ಕೋರಿ ಸಲ್ಲಿಸಿದ್ದ ರ್‍ಜಿಯನ್ನು ನ್ಯಾಯಪೀಠ ಪುರಸ್ಕರಿಸಲು ನಿರಾಕರಿಸಿತ್ತು. ತಮಿಳುನಾಡಿಗೆ 15 ದಿನಗಳ ಕಾಲ 5 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಬೇಕು ಎಂಬ ಕಾವೇರಿ ನೀರು ನರ್ವಹಣಾ ಪ್ರಾಧಿಕಾರದ ಆದೇಶಕ್ಕೆ ತಡೆ ಕೋರಿ ರಾಜ್ಯ ರ್‍ಕಾರ ಸಲ್ಲಿಸಿದ್ದ ರ್‍ಜಿಯ ವಿಚಾರಣೆಯನ್ನು ಕೈಗೆತ್ತಿಕೊಂಡ ತ್ರಿಸದಸ್ಯ ಪೀಠ ತಡೆಯಾಜ್ಞೆ ನೀಡಲು ನಿರಾಕರಿಸಿ ಪ್ರಾಧಿಕಾರದ ಆದೇಶವನ್ನು ಎತ್ತಿ ಹಿಡಿದಿದೆ.ಪ್ರಾಧಿಕಾರದ ಆದೇಶಕ್ಕೆ ತಡೆ ನೀಡುವಂತೆ ರಾಜ್ಯರ್‍ಕಾರ ಸುಪ್ರೀಂಕರ್ಟ್‌ಗೆ ರ್‍ಜಿ ಸಲ್ಲಿಸಿತ್ತು. ಜತೆಗೆ ಮಳೆ ಕೊರತೆಯಿಂದ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದು ರ್‍ನಾಟಕ ಈಗಾಗಲೇ ಸುಪ್ರೀಂಕರ್ಟ್‌ಗೆ ಮನವಿ ಸಲ್ಲಿಸಿತ್ತು. ಸುಪ್ರೀಂಕರ್ಟ್ ರಾಜ್ಯದ ರ್‍ಜಿಯನ್ನು ಮಾನ್ಯ ಮಾಡದ ಕಾರಣ ಮುಂದಿನ 15 ದಿನಗಳವರೆಗೆ 5 ಸಾವಿರ ಕ್ಯೂಸೆಕ್ ನೀರನ್ನು ರ್‍ನಾಟಕ ತಮಿಳುನಾಡಿಗೆ ಹರಿಸಬೇಕಿದೆ. ರಾಜ್ಯದಲ್ಲಿ ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಕೃಷ್ಣರಾಜ ಸಾಗರ ಜಲಾಶಯದಲ್ಲಿ ನೀರಿನ ಪ್ರಮಾಣ ಗಣನೀಯವಾಗಿ ಕುಸಿದಿದ್ದರೂ ಸುಪ್ರೀಂಕರ್ಟಿನ ಈ ಆದೇಶ ರ್‍ನಾಟಕ ರ್‍ಕಾರಕ್ಕೆ ಬಿಸಿ ತುಪ್ಪವಾಗಿ ಪರಿಣಮಿಸಿದೆ.ಈ ಹಿಂದೆ ಕಾವೇರಿ ನದಿ ನರ್ವಹಣಾ ಪ್ರಾಧಿಕಾರ ಸಭೆ ಸೇರಿ ತಮಿಳುನಾಡಿಗೆ ಪ್ರತಿನಿತ್ಯ 5 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ಮಾಡಿದ್ದ ಶಿಫಾರಸ್ಸನ್ನು ನ್ಯಾಯಮರ್ತಿ ಬಿ.ಆರ್. ಗವಾಯಿ ಅವರಿದ್ದ ತ್ರಿಸದಸ್ಯ ಪೀಠ ಎತ್ತಿಹಿಡಿದಿದೆ.ಕಾವೇರಿ ನೀರು ನರ್ವಹಣಾ ಪ್ರಾಧಿಕಾರದ ಆದೇಶವನ್ನು ಪಾಲಿಸುವಂತೆ ಸುಪ್ರೀಂಕರ್ಟ್‌ನ ತ್ರಿಸದಸ್ಯ ಪೀಠ ಆದೇಶ ಹೊರಡಿಸಿದೆ.

ಸುಪ್ರೀಂಕರ್ಟ್‌ನ ಈ ಆದೇಶ ಕಾವೇರಿ ಕೊಳ್ಳದಲ್ಲಿ ನೀರಿನ ಕೊರತೆ ಅನುಭವಿಸುತ್ತಿರುವ ರಾಜ್ಯಕ್ಕೆ ಮತ್ತಷ್ಟು ಸಂಕಷ್ಟ ಎದುರಾಗುವಂತೆ ಮಾಡಿದೆ. ಕಾವೇರಿ ನೀರು ನರ್ವಹಣಾ ಸಮಿತಿ ಮತ್ತು ಕಾವೇರಿ ನರ್ವಹಣಾ ಪ್ರಾಧಿಕಾರದ ಆದೇಶ ಮತ್ತು ಶಿಫಾರಸ್ಸನ್ನು ಒಪ್ಪಲ್ಲ ಎಂದು ಹೇಳುವುದು ಸರಿಯಲ್ಲ, ಈ ಎರಡೂ ಸಮಿತಿಗಳ ಆದೇಶವನ್ನು ರ್‍ನಾಟಕ ಒಪ್ಪಬೇಕು ಮತ್ತು ತಮಿಳುನಾಡಿಗೆ ನೀರು ಹರಿಸಬೇಕು ಎಂದು ಸುಪ್ರೀಂಕರ್ಟ್ ಹೇಳಿದೆ. ಕಾವೇರಿ ಪ್ರಾಧಿಕಾರದ ಆದೇಶಕ್ಕೆ ತಡೆ ನೀಡಲು ಸುಪ್ರೀಂ ನಕಾರಪ್ರಾಧಿಕಾರದ ಆದೇಶದಲ್ಲಿ ಮಧ್ಯ ಪ್ರವೇಶಿಸಲ್ಲ ಸುಪ್ರೀಂನ್ಯಾಯಾಲಯದಲ್ಲಿ ರ್‍ನಾಟಕಕ್ಕೆ ಹಿನ್ನಡೆತಮಿಳುನಾಡಿಗೆ 15 ದಿನ 5 ಸಾವಿರ ಕ್ಯೂಸೆಕ್ ನೀರು ಹರಿಸುವ ಅನಿವರ್ಯತೆ ಸಂಕಷ್ಟ

# ಆಹಾರ ಸುರಕ್ಷತೆ: ಆಂದೋಲನ ನಡೆಸಲು ಸೂಚನೆ

» **ಚಿತ್ರದುರ್ಗ**

ಆಹಾರಸುರಕ್ಷತೆಕುರಿತಆಂದೋಲನವನ್ನು ಎಲ್ಲಾ ತಾಲ್ಲೂಕು ಕೇಂದ್ರಗಳು ಹಾಗೂ ಇತರೆ ಸ್ಥಳಗಳಲ್ಲಿ ನಡೆಸಬೇಕು. ಎಲ್ಲಾ ವ್ಯಾಪಾರಸ್ಥರನ್ನು ನೋಂದಣಿ, ಪರವಾನಗಿ ವ್ಯಾಪ್ತಿಗೆ ತರಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳಕಚೇರಿಸಭಾಂಗಣದಲ್ಲಿ ಈಚಗೆ ನಡೆದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಜಿಲ್ಲಾಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ನಗರಸಭೆ ವತಿಯಿಂದ ಟ್ರೇಡ್ ಲೈಸನ್ಸ್ ನೀಡುವಾಗ ಈಖಖಂಖ (ಆಹಾರ ಸುರಕ್ಷತಾ & ಗುಣಮಟ್ಟ ಇಲಾಖೆ) ಲೈಸನ್ಸ್ ಪಡೆದಿದ್ದಾರೆಯೇ ಎಂದು ಗಮನಿಸಿ ನಂತರ ಟ್ರೇಡ್ ಲೈಸನ್ಸ್ ನೀಡಬೇಕು. ಬೀದಿ ಬದಿ ವ್ಯಾಪಾರಿಗಳು ನೊಂದಣಿ ಮಾಡಿಕೊಳ್ಳದೆ ಅನ್ನೈರ್ಮಲ್ಯದ ವಾತಾವರಣದಲ್ಲಿ ವ್ಯಾಪಾರ ನಡಸುತ್ತಿದ್ದು, ಅಂಥವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಸೂಚಿಸಿದರು. ಎಲ್ಲಾ ತರಹದ ವ್ಯಾಪಾರಸ್ಥರು ಅಂದರೆ ಆಹಾರ ಪದಾರ್ಥಗಳ ಮಾರಾಟಗಾರರು, ತಯಾರಕರು, ಸಗಟು ವ್ಯಾಪಾರಸ್ಥರು, ಚಿಲ್ಲರೆ ವ್ಯಾಪಾರಸ್ಥರು, ಬೀದಿ ಬದಿ ವ್ಯಾಪಾರಿಗಳು, ಆಹಾರ ಸುರಕ್ಷತೆ ಕಾಯ್ದೆ 2006, ನಿಯಮ ನಿಬಂಧನೆ 2011, ಸೆಕ್ಷನ್ 63ರಡಿ ನೋಂದಣಿ, ಪರವಾನಗಿ ಪಡೆಯುವುದು ಕಡ್ಡಾಯ ಎಂದರು.

ಆಹಾರವಾಗಿ ಬಳಸುವ ಎಲ್ಲಾ ಪದಾರ್ಥ ಅಂದರೆ ದವಸ ಧಾನ್ಯ, ತರಕಾರಿ, ಮಾಂಸ, ಕೋಳಿ, ಮೊಟ್ಟೆ, ಹಾಲು, ಬೀದಿ ಬದಿ ವ್ಯಾಪಾರಿ, ನೀರಿನ ವ್ಯಾಪಾರ, ಬೇಕರಿ, ಹೋಟೆಲ್, ಸಿಹಿ ತಿಂಡಿ ಅಂಗಡಿ, ಆಹಾರ ಪದಾರ್ಥ ಪ್ಯಾಕ್ ಮಾಡಿ ಮಾರುವವರು, ಸರ್ಕಾರಿ, ಅರೆ ಸರ್ಕಾರಿ ಶಾಲೆಗಳಲ್ಲಿ ಅಡುಗೆ ಕಾರ್ಯ ನಿರ್ವಹಿಸುವವರು, ಬೆಲ್ಲದ ವ್ಯಾಪಾರಿ, ಅಡುಗೆ ಎಣ್ಣೆ ವ್ಯಾಪಾರಿ, ಬೇಳೆ ಹಾಗೂ ಇತರೆ ಎಲ್ಲಾ ತರಹದ ವ್ಯಾಪಾರಸ್ಥರು ಇದರ ವ್ಯಾಪ್ತಿಗೆ ಬರುತ್ತಾರೆ. ಹಾಗೂ ಆಹಾರ ಸುರಕ್ಷತೆ ಕಾಯ್ದೆಯಡಿ ಕಡ್ಡಾಯವಾಗಿ ನೋಂದಣಿ ಮಾಡಿಸಲು ಸೂಚಿಸಿದರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಅಂಕಿತಾಧಿಕಾರಿ ಡಾ.ಸಿ.ಎಲ್.ಫಾಲಾಕ್ಷ ಅವರು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ನಡೆದ ಬಂದ ದಾರಿಯನ್ನು ಸಭೆಯಲ್ಲಿ ವಿವರಿಸಿದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಉಪನಿರ್ದೇಶಕ ಬಿ.ಕೆ. ಮಂಜುನಾಥಸ್ವಾಮಿ, ವರ್ತಕರ ಸಂಘ ಸುಬ್ರಮಣ್ಯ, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಎಂ.ಮಹೇಂದ್ರ ಕುಮಾರ್, ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ಜ್ಞಾನೇಶ್ವರಿ, ಆಹಾರ ಸುರಕ್ಷತಾಧಿಕಾರಿಗಳಾದ ತಿರುಮಲೇಶ್, ಚಿದಾನಂದಪ್ಪ, ನಂದಿನಿ ಕಡಿ, ಮಂಜುನಾಥ್ ಹಾಗೂ ಇತರೆ ಇಲಾಖಾ ಸಿಬ್ಬಂದಿ ಇದ್ದರು.

# ಶೌರ್ಯ ಜಾಗರಣ ರಥಯಾತ್ರೆ 25ರಂದು

» **ಚಿತ್ರದುರ್ಗ**

ಹಿಂದೂ ಯುವಕರಲ್ಲಿ ನಮ್ಮ ಪೂರ್ವಜರ ಮತ್ತು ಹುತಾತ್ಮರ ಜೀವನದ ಬಗ್ಗೆ ಹೆಮ್ಮೆಯ ಭಾವವನ್ನು ಮೂಡಿಸುವುದು. ಅವರ ಪ್ರೇರಣೆಯಿಂದ ಸ್ಫೂರ್ತಿ ಪಡೆದು ಯುವಕರು ದೇಶಕ್ಕಾಗಿ ಬದುಕುವ ಸಂಕಲ್ಪ ಮಾಡಿಸುವುದು ಶೌರ್ಯ ಜಾಗರಣ ರಥಯಾತ್ರೆಯ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ದಕ್ಷಿಣ ವಿಶ್ವ ಹಿಂದು ಪರಿಷತ್ ಪ್ರಾಂತ ಕಾರ್ಯದರ್ಶಿ ಜಗನ್ನಾಥ್ ಶಾಸ್ತ್ರಿ ತಿಳಿಸಿದರು.

ನಗರದ ಹಿಂದು ಮಹಾ ಗಣಪತಿ ಸಭಾ ಮಂಟಪದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾವೆಲ್ಲಾ ಹಿಂದೂ ನಾವೆಲ್ಲ ಒಂದು ಎಂಬ ಘೋಷಣೆಯಿಂದ ಸಮಾಜದಲ್ಲಿ ಸಾಮಾಜಿಕ ಸಾಮರಸ್ಯಕ್ಕಾಗಿ ಸಂಕಲ್ಪ ಮಾಡಿಸುವುದು ಮುಖ್ಯ ಕಾರ್ಯಕ್ರಮವಾಗಿದೆ. ಯುವಕರನ್ನು ವ್ಯಸನಗಳಿಂದ ಮುಕ್ತಿಗೊಳಿಸಿ, ಸಂಸ್ಕಾರವನ್ನು ನೀಡಿ ದೇಶಭಕ್ತರನ್ನಾಗಿಸುವುದು ಲವ್ ಜಿಹಾದ್, ಮತಾಂತರ, ಗೋಹತ್ಯೆ ಇವುಗಳನ್ನು ತಡೆದು ಹಿಂದೂ ಧರ್ಮದ ರಕ್ಷಣೆ ಮುಖ್ಯವಾಗಿದೆ ಈ ಮೂಲಕ ಇಡೀ ದೇಶದ ಯುವಕರನ್ನು ಸಂಘಟಿಸಿ, ದೇಶದ ಯುವಶಕ್ತಿ ರಾಷ್ಟ್ರಶಕ್ತಿಯನ್ನಾಗಿಸುವ ಕಾರ್ಯವನ್ನು ಮಾಡುವುದು ನಮ್ಮ ಉದ್ದೇಶ ಎಂದರು.



ಕರ್ನಾಟಕ ದಕ್ಷಿಣ ಬಜರಂಗದಳದ ಪ್ರಾಂತ ಸಹ ಸಂಯೋಜಕ್ ಎಸ್.ಆರ್.ಪ್ರಭಂಜನ್ ಮಾತನಾಡಿ, ಹಿಂದೂ ಧರ್ಮದ ವೈಭವಯುತ ಚರಿತ್ರೆ, ಸಂಸ್ಕೃತಿ, ಸಂಪ್ರದಾಯ ಇಡೀ ಸಮಾಜಕ್ಕೆ ತಿಳಿಸುತ್ತಾ ಸಮಾಜಕ್ಕೆ ಅನ್ಯರಿಂದ ಆಗಿರುವ ಹಾನಿ ಹಾಗೂ ಪ್ರಸ್ತುತ ಆಗುತ್ತಿರುವ ಹಾನಿ ಅನ್ಯರ ತುಷ್ಟಿಕರಣ ಮಾಡಿ ರಾಜಕೀಯ ಮಾಡುತ್ತಿರುವ ಪರಿ ತಿಳಿಸಿ ಅದನ್ನು ತುಳಿದು ನಿಂತು ಗೌರವಯುತ ಶಾಂತಿಯುತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ಕೊಡುವುದು ಉದ್ದೇಶವಾಗಿದೆ ಎಂದರು.

ಹಿಂದೂಧರ್ಮದಅಡಿಪಾಯಗಳಾದಗೋವು, ದೇವಸ್ಥಾನಗಳು, ಶ್ರದ್ಧಾ ಕೇಂದ್ರಗಳನ್ನು ಉಳಿಸಿ ಬೆಳೆಸುವಲ್ಲಿ ಪ್ರೇರಣೆ ಕೊಡುವುದು.ಸಮಾಜದಲ್ಲಿ ಪರಸ್ಪರ ಸಾಮರಸ್ಯ ಕಾಪಾಡಿ ನಮ್ಮ ಹೆಮ್ಮೆಯ ಸನಾತನ ಹಿಂದೂಧರ್ಮ ಮತ್ತು ಸಂಸ್ಕೃತಿ, ಸಂಪ್ರದಾಯಗಳನ್ನು ತಿಳಿಹೇಳಿ ಸಮರ್ಪಕವಾಗಿ ಆಚರಿಸುವಂತೆ ಪ್ರೇರಣೆ ನೀಡುವುದು. ಯುವಪೀಳಿಗೆಯನ್ನು ಪಾಶ್ಚಾತ್ಯ ಪ್ರಭಾವದಿಂದ ಹೊರ ತಂದು ಮಹಾ ಪಾತಕಗಳಿಂದ ಮುಕ್ತಗೊಳಿಸಿ ನಮ್ಮ ಹೆಮ್ಮೆಯ ಧರ್ಮ ಆಚರಣೆಗೆ ಪ್ರೇರೇಪಣೆ ನೀಡಲಾಗುತ್ತದೆ ಎಂದು ತಿಳಿಸಿದರು.

ಹಿಂದೂ ಧರ್ಮ ಮತ್ತು ಸಂಸ್ಕೃತಿಯ ಮೇಲಿನ ಗೌರವವನ್ನು ಜಾಗೃತಗೊಳಿಸುವುದು ರಾಷ್ಟ್ರನಿರ್ಮಾಣದ ಮಹಾ ಯಜ್ಞದಲ್ಲಿ ನಾವೆಲ್ಲರೂ ಭಾಗವಹಿಸೋಣ ಭಾರತ ಮಾತೆಯ ರಕ್ಷಣೆಯ ಸಂಕಲ್ಪವನ್ನು ಸ್ವೀಕರಿಸಿ ವಿಶ್ವಹಿಂದೂ ಪರಿಷದ್ ಮತ್ತು ಬಜರಂಗದಳ ಆಯೋಜಿಸಿರುವ ಶೌರ್ಯ ಜಾಗೃತ ರಥ ಯಾತ್ರೆಯಲ್ಲಿ ಭಾಗವಹಿಸಿ ಎಂದರು.

ಸೆ. 25 ರಂದು ಬೆಳಿಗ್ಗೆ 10ಕ್ಕೆ ಹಿಂದು ಮಹಾ ಗಣಪತಿಯ ಶಕ್ತಿ ಮಂಟಪದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಇದರ ಸಾನಿಧ್ಯವನ್ನು ನಗರದ ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಸ್ವಾಮೀಜಿ, ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ, ಭೋವಿ ಗುರುಪೀಠ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ, ಹೊಸದುರ್ಗದ ಕುಂಚಿಟಿಗ ಮಹಾ ಸಂಸ್ಥಾನದ ಶ್ರೀ ಶಾಂತವೀರ ಸ್ವಾಮೀಜಿ, ಯಾದವ ಮಹಾ ಸಂಸ್ಥಾನದ ಶ್ರೀ ಕೃಷ್ಣ ಯಾದವಾನಂದ ಸ್ವಾಮೀಜಿ, ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ, ಲಂಬಾಣಿ ಗುರುಪೀಠದ ಸೇವಾಲಾಲ್ ಸ್ವಾಮೀಜಿ ವಹಿಸಲಿದ್ದಾರೆ ಎಂದು ತಿಳಿಸಿದರು.

ಶೌರ್ಯ ಜಾಗರಣ ರಥಯಾತ್ರೆ ಸಮಿತಿ ಅಧ್ಯಕ್ಷ ಜಿ.ಎಂ.ಸುರೇಶ್, ಪ್ರಾಂತ ಸಮಿತಿ ಸದಸ್ಯ ಟಿ.ಬದರಿನಾಥ್ ಉಪಸ್ಥಿತರಿದ್ದರು.

# ವರವಿನಾರಹಟ್ಟಿ ಅಗ್ನಿ ಆಕಸ್ಮಿಕ ಪ್ರಕರಣ: ಜಪಾನಂದ ಸ್ವಾಮೀಜಿಯಿಂದ ನೆರವು



» **ಚಳ್ಳಕೆರೆ**

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವರವಿನಾರಹಟ್ಟಿ ಗ್ರಾಮದಲ್ಲಿ ಬುಧವಾರ ರಾತ್ರಿ 7.30ರ ಸಮಯದಲ್ಲಿ ಗುಡಿಸಲು ಮತ್ತು ಅಂಗಡಿಗೆ ಆಕಸ್ಮಿಕ ಬೆಂಕಿ ಬಿದ್ದು ಸಂಪೂರ್ಣವಾಗಿ ಸುಟ್ಟು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿತ್ತು. ಈ ಬಗ್ಗೆ ಮಾಹಿತಿ ಪಡೆದ ಪಾವಗಡದ ಶ್ರೀರಾಮಕೃಷ್ಣ ಸೇವಾಶ್ರಮದ ಜಪಾನಂದಸ್ವಾಮೀಜಿ ದೂರವಾಣಿ ಮೂಲಕ ಸಂತ್ರಸ್ತ ಕುಟುಂಬವನ್ನು ಸಂಪರ್ಕಿಸಿ ಅವರಿಗೆ ಸಾಂತ್ವನ ತಿಳಿಸಿದರು. ಪಾಪಯ್ಯ ಮತ್ತು ಭಾಗ್ಯಮ್ಮ ದಂಪತಿಗಳ ಗುಡಿಸಲು ಬೆಂಕಿಗೆ ಆಹುತಿಯಾಗಿದ್ದು, ಪರಿಹಾರಾರ್ಥವಾಗಿ ಕೂಡಲೇ ಹತ್ತು ಸಾವಿರ ನಗದು ಹಣ, ಪಾತ್ರೆ, ವಸ್ತ್ರ, ದಿನಬಳಕೆ ವಸ್ತುಗಳನ್ನು ಅವರಿಗೆ ನೀಡಿದ್ದಾರೆ. ಸ್ವಾಮೀಜಿಯ ಪರವಾಗಿ ಮಠದ ಸಂಯೋಜಕ ಸಿ.ಪಿ.ಮಹೇಶ್, ಗುರುವಾರ ಬೆಳಗ್ಗೆ ಅವರ ಮನೆಗೆ ತೆರಳಿ ಸ್ವಾಮೀಜಿ ನೀಡಿದ ವಸ್ತು ಹಾಗೂ ಹಣವನ್ನು ಹಸ್ತಾಂತರ ಮಾಡಿದರು. ಸ್ವಾಮೀಜಿಯವರು ಆರ್ಥಿಕ ನೆರವು ನೀಡಿದ್ದಲ್ಲದೆ, ತಮ್ಮ ಮನೆಗೆ ಭೇಟಿ ನೀಡಿ ಇನ್ನೂ ಹೆಚ್ಚಿನ ಸೌಲಭ್ಯ ಒದಗಿಸುವ ಬಗ್ಗೆ ಭರವಸೆ ನೀಡಿರುತ್ತಾರೆ. ಸ್ವಾಮೀಜಿಯವರಿಗೆ ಕೃತಜ್ಞತೆ ಸಲ್ಲಿಸಿದ ಕುಟುಂಬ :- ಸ್ವಾಮೀಜಿಯವರ ಮೂಲಕ ಹಣ ಹಾಗೂ ವಸ್ತು ಪಡೆದ ಪಾಪಯ್ಯ ಮತ್ತು ಭಾಗ್ಯಮ್ಮ ದಂಪತಿಗಳು ಮಾಧ್ಯಮಗಳಮೂಲಕ ಸ್ವಾಮೀಜಿಯವರು ಮಾಹಿತಿ ಪಡೆದು ನಮಗೆ ಈ ನೆರವು ನೀಡಿದ್ದಾರೆ. ಸ್ವಾಮೀಜಿಯವರ ಈ ಕಾರ್ಯ ನಮಗೆ ಮೆಚ್ಚುಗೆ ತಂದಿದೆ. ಸರ್ಕಾರ ಸಕಾಲದಲ್ಲಿ ನಮಗೆ ಸ್ಪಂದಿಸದೇ ಇದ್ದರೂ ಸ್ವಾಮೀಜಿಯವರು ನಮಗೆ ನೆರವು ನೀಡಿದ್ದಲ್ಲದೆ, ಧೈರ್ಯ ತುಂಬಿದ್ದಾರೆ. ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

# ಧಾರ್ಮಿಕ ಕಾರ್ಯಕ್ರಮ ಹಾಗೂ ಸಮಾರಂಭಗಳಲ್ಲಿ ಮೊದಲ ಪೂಜೆ ಪಡೆಯುವ ಏಕೈಕ ದೇವರು ವಿಘ್ನವಿನಾಶಕ ಶ್ರೀಗಣೇಶ: ಡಾ.ಅನಂತರಾಮ್ ಗೌತಮ್

» **ಚಳ್ಳಕೆರೆ**

ಕಳೆದ ನೂರಾರು ವರ್ಷಗಳಿಂದ ಹಲವಾರು ಧಾರ್ಮಿಕ ಕಾರ್ಯಕ್ರಮಗಳನ್ನು ನಾವುಗಳು ಆಚರಣೆ ಮಾಡಿಕೊಂಡು ಬಂದಿದ್ದೇವೆ. ಕೆಲವೊಂದು ಸಮುದಾಯ ತಮ್ಮದೇಯಾದ ಮನೆ ದೇವರು ಹಾಗೂ ಗುರುಗಳನ್ನು ಪೂಜಿಸುವುದು ವಾಡಿಕೆ. ಆದರೆ, ಸಮಾಜದ ಪ್ರತಿಯೊಂದು ಸಮುದಾಯವೂ ವಿಶೇಷ ಭಕ್ತಿ ಗೌರವದಿಂದ ಪೂಜಿಸುವ ಏಕೈಕ ದೇವರ ಎಂದರೆ ಅದು ಶ್ರೀಗಣೇಶ ಎಂದು ಡಾ.ಅನಂತರಾಮ್ ಗೌತಮ್ ತಿಳಿಸಿದರು.



ಅವರು, ಬುಧವಾರ ತಡರಾತ್ರಿ ಗಾಯಿತ್ರಿ ಮಹಿಳಾ ಸಾಂಸ್ಕೃತಿಕ ಭವನದಲ್ಲಿ ಗಣೇಶನ ವಿಸರ್ಜನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಗಣೇಶ ಚತುರ್ಥಿಯ ಆಚರಣೆ ಕುರಿತು ಉಪಯುಕ್ತ ಮಾಹಿತಿಯನ್ನು ನೀಡಿದರು. ದೇವಾನುದೇವತೆಗಳಲ್ಲಿ ಸರ್ವಶಕ್ತನಾದ ಮೊದಲ ಪೂಜೆಯನ್ನು ಪಡೆಯುವ ಏಕೈಕ ದೈವ ಶ್ರೀಗಣೇಶ. ಗಣೇಶನನ್ನು ಪೂಜಿಸಿದರೆ ನಮ್ಮೆಲ್ಲಾ ಸಂಕಷ್ಟಗಳು ಪಾರಾಗುವುದು ಎಂಬ ನಂಬಿಕೆ ಸುಳ್ಳಲ್ಲ. ಮುಂದಿನ ದಿನಗಳಲ್ಲೂ ಸಹ ಇಂತಹ ಉತ್ಸವಗಳು ಹೆಚ್ಚು, ಹೆಚ್ಚು ಆಚರಣೆಯಾಗಬೇಕು. ಎಲ್ಲರೂ ಪೂಜೆಯಲ್ಲಿ ಪಾಲ್ಗೊಂಡು ಗಣೇಶನ ಅನುಗ್ರಹಕ್ಕೆ ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಎಂ.ಸತ್ಯನಾರಾಯಣ, ಸಿ.ಎಸ್.ಗೋಪಿನಾಥ, ಜಿ.ಕೃಷ್ಣಮೂರ್ತಿ, ಸೀತಾಲಕ್ಷ್ಮಿ ವಾದಿರಾಜ್, ಮಧುರ, ಜಯಲಕ್ಷ್ಮಿ, ಗಂಗಾಧರಭಟ್, ಶ್ರೀನಾಥಶರ್ಮ, ವಿಶ್ವನಾಥ, ಶಾಂತಮ್ಮ, ಶೈಲಜಾ, ನಾಗಮಣಿ, ಎಚ್. ಜೆ.ಜಯರಾಮ್ ಭಾಗವಹಿಸಿದ್ದರು.

# ಗೋಪನಹಳ್ಳಿ : ಹಾಡುಹಗಲೇ ಸಾರ್ವಜನಿಕ ರಸ್ತೆಯಲ್ಲಿ ಇಸ್ಪೀಟ್ ಜೂಜಾಟ : 12600 ನಗದು ವಶ.

**ಚಳ್ಳಕೆರೆ:** ಚಳ್ಳಕೆರೆ ಠಾಣಾ ವ್ಯಾಪ್ತಿಯ ಗೋಪನಹಳ್ಳಿ ಗ್ರಾಮದ ಸಾರ್ವಜನಿಕ ರಸ್ತೆಯಲ್ಲಿ ಹಾಡುಹಗಲೇ ಇಸ್ಪೀಟ್ ಜೂಜಾಟವಾಡುತ್ತಿದ್ದ ಅದೇ ಗ್ರಾಮದ ಮಹಲಿಂಗಪ್ಪ ಇತರೆ ಏಳು ಜನರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ 12600ರೂ ಹಣವನ್ನು ವಶಪಡಿಸಿಕೊಂಡಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಪಿಎಸ್ಐ ಜೆ.ಶಿವರಾಜ್, ಸಾರ್ವಜನಿಕರ ಮಾಹಿತಿ ಮೇರೆಗೆ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಜೂಜಾಟವಾಡುತ್ತಿದ್ದವರನ್ನು ವಶಕ್ಕೆ ಪಡೆಯಲಾಗಿದೆ. ಗ್ರಾಮೀಣ ಭಾಗದಲ್ಲಿ ಇಸ್ಪೀಟ್ ಜೂಜಾಟದ ಪ್ರಕರಣಗಳು ಇದ್ದಲ್ಲಿ ಕೂಡಲೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಅವರು ಮನವಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್



ದಾವಣಗೆರೆ ಲಯನ್ ಕಿಂಗ್ ಬಾಯ್ಸ್ ಗೆಳೆಯರ ಬಳಗ ದಿಂದ 2ನೇ ವರ್ಷದ ವಿನಾಯಕ ಮಹೋತ್ಸವ ದೇವರಾಜ್ ಅರಸ್ ಬಡಾವಣೆ ಸಿ, ಬ್ಲಾಕ್ 3,ನೇ ಮೇನ್, 2, ನೇ ಕ್ರಾಸ್‌ನಲ್ಲಿ ಇಂದು ದಿ (21)ರ ಗುರುವಾರದಂದು ಮಧ್ಯಾಹ್ನ 12ಕ್ಕೆ ಅನ್ನಸಂತರ್ಪಣೆ ಯನ್ನು ಹಮ್ಮಿಕೊಳ್ಳಲಾಗಿದೆ. ಲಯನ್ ಕಿಂಗ್ ಬಾಯ್ಸ್ ಗೆಳೆಯರ ಬಳಗದಿಂದ ತಿಳಿಸಿದ್ದಾರೆ.

### ನಮಾಜ್ ವಿರುದ್ಧ ನಾವ ಕೋರ್ಟ್‌ಗೆ ಹೋಗುತ್ತೇವೆ: ಮುತಾಲಿಕ್

ಹುಬ್ಬಳ್ಳಿ: ಮೂರು ದಿನ ಯಾವುದೇ ಗೊಂದಲ್ಲ ಇಲ್ಲದೆ ಗಣೇಶ ಪ್ರತಿಷ್ಠಾಪನೆಯಾಗಿದೆ. ಹಿಂದೂ ಸಮಾಜ ಶಾಂತಿಯಿಂದ ಆಚರಣೆ ಮಾಡಿದೆ. ಈದ್ಗಾ ಮೈದಾನ ಶುದ್ಧಿಯಾಗಿದೆ. ಗಣೇಶ ಉತ್ಸವಕ್ಕೆ ವಿರೋಧ ಮಾಡಿದವರು ದೇಶ ವಿರೋಧಿಗಳು, ಅಧರ್ಮಿಯರು. ನಾವು ಅದನ್ನು ಮೆಟ್ಟಿ ನಿಂತು ಆಚರಣೆ ಮಾಡಿದ್ದೇವೆ ಎಂದು ಶ್ರೀರಾಮಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಹೇಳಿದರು. ಅಂಜುಮನ್ ಕಮೀಟಿಯವರು ನೀಚರು. ಹಿಂದೂ ಸಮಾಕ ಕೆಣಕಿದ್ರೆ ನಾವು ಮಸೀದಿಯಲ್ಲಿ ಗಣಪತಿ ಕೂರಸುತ್ತೇವೆ. ಮಸೀದಿಯಲ್ಲಿ ಗಣೇಶ ಕೂರಿಸೋ ತಾಕತ್ತು ನಮಗಿದೆ. ಅಂಜುಮನ್ ಕೋರ್ಟ್‌ಗೆ ಹೋಗುತ್ತಿನ್ತೇವೆ ಅನ್ನೋದು ಸರಿ ಅಲ್ಲ. ನಿಮ್ಮ ಸೊಕ್ಕು ಸರಿ ಅಲ್ಲ. ಇದೇನು ಪಾಕಿಸ್ತಾನ ಅಲ್ಲ, ಅಫಘಾನಿಸ್ತಾನ ಅಲ್ಲ. ಇದು ನಮ್ಮ ನೆಲ, ಮೈದಾನ ಪಾಲಿಕೆ ಆಸ್ತಿ ಎಂದು ಹೇಳಿದೆ. ಅಕಸ್ಮಾತ್ ನೀವು ಕೋರ್ಟ್ ಗೆ ಹೋಗುತ್ತೀರಿ ಅನ್ನೋದೇ ಆದರೆ ನಾವು ನಮಾಜ್‌ಗೆ ಹೋಗುತ್ತೇವೆ ಎಂದರು.

### ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಮಸೂದೆ ಒಪ್ಪಿಗೆ: ದಾವಣಗೆರೆಯಲ್ಲಿ ವಿಜಯೋತ್ಸವ

ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಮಸೂದೆ ಒಪ್ಪಿಗೆ ಹಿನ್ನೆಲೆ ದಾವಣಗೆರೆಯಲ್ಲಿ ಬಿಜೆಪಿ ಕಾರ್ಯಕರ್ತರಿಂದ ವಿಜಯೋತ್ಸವ ನಡೆಯಿತು. ದಾವಣಗೆರೆಯ ಮಹಾನಗರ ಪಾಲಿಕೆ ಆವರಣದಲ್ಲಿ ಸಿಹಿ ಹಂಚಿ ಸಂಭ್ರಮಿಸಲಾಯಿತು. ವಿಧಾನ ಸಭೆ ಹಾಗೂ ಲೋಕ ಸಭೆಯಲ್ಲಿ ಮಹಿಳೆಯರಿಗೆ ಶೇ 33 ರಷ್ಟು ಮೀಸಲಾತಿ ನೀಡಲಾಗಿದೆ. ಇದಕ್ಕೆ ಪ್ರಧಾನಿ ನರೇಂದ್ರಮೋದಿ ಅವರ ದಿಟ್ಟ ನಿರ್ಧಾರವೇ ಕಾರಣ ಎಂದು ಘೋಷಣೆ ಕೂಗಲಾಯಿತು.

### ರಾಜ್ಯ ಸರ್ಕಾರಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ಎಚ್ಚರಿಕೆ

ಕಾವೇರಿಗಾಗಿಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸುತ್ತಿರುವ ಕರ್ನಾಟಕ ರಕ್ಷಣಾ ವೇದಿಕೆ, ಯಾವುದೇ ಕಾರಣಕ್ಕೂ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಬಾರದು ಎಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದೆ. ಅಲ್ಲದೆ, 12 ಗಂಟೆಗೆ ಕರವೇನಾರಯಣಗೌಡನೇತೃತ್ವದಲ್ಲಿವಿಧಾನಸೌಧಕ್ಕೆ ಮುತ್ತಿಗೆ ಹಾಕಲು ನಿರ್ಧರಿಸಲಾಗಿದೆ. ಹೀಗಾಗಿ ಪ್ರತಿಭಟನೆ ರ್ಯಾಲಿ ತಡೆಯಲು ಪೊಲೀಸರು ಸಜ್ಜಾಗಿದ್ದಾರೆ.

### ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಭೇಟಿಯಾದ ಸಿಎಂ, ಡಿಸಿಎಂ



ಕಾವೇರಿ ಜಲ ವಿವಾದ ಸಂಬಂಧ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಅವರನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಭೇಟಿಯಾದರು. ದೆಹಲಿಯ ಅಕ್ಬರ್ ರಸ್ತೆಯಲ್ಲಿರುವ ಗಜೇಂದ್ರ ಸಿಂಗ್ ಶೇಖಾವತ್ ನಿವಾಸದಲ್ಲಿ ಭೇಟಿಯಾಗಿ ನೀರು ಹಂಚಿಕೆ ವಿವಾದದ ಕುರಿತು ಮಾತುಕತೆ ನಡೆಸುತ್ತಿದ್ದಾರೆ.

## ಪ್ರಮುಖ ಸುದ್ದಿ

# ಇಂಡಿಯನ್ ಸ್ವಚ್ಚತಾ ಲೀಗ್ ಸೀಸನ್-2ಗೆ ಚಾಲನೆ

» **ಮೊದಲ ಪುಟದಿಂದ**

ಅಧ್ಯಕ್ಷತೆ ವಹಿಸಿಕೊಂಡಿದ್ದ ಶಾಸಕ ಡಾ.ಎಂ.ಚಂದ್ರಪ್ಪ ಅವರು ಕಾರ್ಯಕ್ರಮವನ್ನು ಉದ್ದೇಶಿ ಮಾತನಾಡಿ ಹೊಳಲ್ಕೆರೆ ಪಟ್ಟಣವು ಅಭಿವೃದ್ಧಿ ಹಾದಿಯಲ್ಲಿದ್ದು ಕೇಂದ್ರ ಸರ್ಕಾರದ ಮಾಹತ್ವಾಕಾಂಕ್ಷಿ ಯೋಜನೆಯಾದ ಸ್ವಚ್ಛ ಭಾರತ ಅಂಗವಾಗಿ ಇಂಡಿಯನ್ ಸ್ವಚ್ಚತಾ ಲೀಗ್ ಅಭಿಯಾನವನ್ನು ಪ್ರಾರಂಭಿಸಿದ್ದು ಈ ಹಿಂದೆ ಹೊಳಲ್ಕೆರೆ ಪುರಸಭೆಯಿಂದ ಅಯೋಜಿಸಲಾಗಿದ್ದ ಇಂಡಿಯನ್ ಸ್ವಚ್ಚತಾ ಲೀಗ್ ಸೀಸನ್ ರಲ್ಲಿ ಭಾಗವಹಿಸಿ ಸ್ವಚ್ಚತಾ ಕೆಲಸಗಳನ್ನು ಮಾಡಿದ್ದು ಅದರ ಸದುಪಯೋಗವಾಗಿ ಹೊಳಲ್ಕೆರೆ ಪುರಸಭೆಗೆ ರಾಷ್ಟ್ರ ಪ್ರಶಸ್ತಿ ಲಭಿಸಿರುತ್ತದೆ. ಅದರಂತೆ ಈ ಬಾರಿಯು ನಾನು ಇನ್ನು ಹೆಚ್ಚಿನದಾಗಿ ಸ್ವಚ್ಚತೆಗೆ ಗಮನಹರಿಸಿ ಈ ಬಾರಿಯು ಹೊಳಲ್ಕರ ರಾಷ್ಟ ಮಟ್ಟದಲ್ಲಿ ಹೆಸರು ಮಾಡುವ ಹಾಗೆ ಕೆಲಸ ಮಾಡೋಣ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾದ ಎಂ.ಕಾರ್ತಿಕ್, ಪುರಸಭೆ ಆಡಳಿತಾಧಿಕಾರಿಗಳು ಹಾಗೂ ಉಪವಿಭಾಗಾಧಿಕಾರಿಗಳು, ಚಿತ್ರದುರ್ಗದವರು ಸ್ವಚ್ಚಹಾ ಕೆಲಸಗಳನ್ನು ನಿರ್ವಹಿಸುವುದರ ಜೊತೆಗೆ ಹೊಳಲ್ಕೆರೆ ಪರಸಭೆ ವತಿಯಿಂದ ಆರ್.ಆರ್. ಆರ್ ಕೇಂದ್ರಗಳಲ್ಲಿ ಸ್ವೀಕರಿಸಲಾಗಿದ್ದ ತ್ಯಾಜ್ಯದಿಂದ ತಯಾರಿಸಲಾಗಿದ್ದ ಸ್ವಚ್ಚತಾ ಜಾಗೃತಿ ನಾಮಫಲಕಗಳನ್ನು ಕೆರೆಯ ಸುತ್ತಮುತ್ತ ಅಳವಡಿಸಿ ಸದರಿ ನಾಮಫಲಕದಲ್ಲಿರುವಂತೆ ಸಾರ್ವಜನಿಕರು ನಡೆದುಕೊಳ್ಳಬೇಕು ಎಂದು ತಿಳಿಸಿದರು.

ತಹಶೀಲ್ದಾರ್ ಭೀ.ಬೀ.ವಾತಿಮಾ, ತಹಶೀಲ್ದಾರ ಹಾಗೂ ಉದ್ದೇಶಿಸಿ ಮಾತನಾಡಿ ನಾವು ಈ ಒಂದು ದಿನ ಮಾಡುತ್ತಿರುವ ಸ್ವಚ್ಛತ ಕೆಲಸ ಪೌರಕಾರ್ಮಿಕರು ದಿನನಿತ್ಯ ಮಾಡುತ್ತಿದ್ದು, ಪೌರಕಾರ್ಮಿಕರು ಮಾಡುವ ಕೆಲಸವನ್ನು ಪ್ರಶಂಶಿಸಿ ದಿನನಿತ್ಯ ನಾವು ಕಸವನ್ನು ಎಲ್ಲಂದರಲ್ಲಿ ಹಾಕದೇ ಪುರಸಭೆಯಿಂದ ಅಳವಡಿಸಿರುವ ಡಸ್ಟ್ ಬಿನ್ ಗಳಲ್ಲಿ ಹಾಕುವುದು ಹಾಗೂ ಮನೆಯ ಕಸವನ್ನು ಹಸಿಕಸ ಒಣಕಸವಾಗಿ ವಿಂಗಡಿಸಿ ಪುರಸಭೆ ವಾಹನಕ್ಕೆ ನೀಡಿದರೇ ಸ್ವಚ್ಚ ಹೊಳಲ್ಕೆರೆ ನಿರ್ಮಿಸಿಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮುಖ್ಯಾಧಿಕಾರಿಗಳಾದ ಪಿ.ವಾಸೀಂ ರವರು ಮಾತನಾಡಿ ಮಾನ್ಯ ಶಾಸಕರು, ತಾಲ್ಲೂಕು ಆಡಳಿತ, ಅರೋಗ್ಯ ಇಲಾಖೆ, ಶಿಕ್ಷಣಾ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ರೋಟರಿ ಕ್ಲಬ್, ರೆಡ್ ಕ್ರಾಸ್ ಸಂಸ್ಥೆ, ಹಾಗೂ ಪಟ್ಟಣದಲ್ಲಿ ಸ್ವಾಸಹಾಯ ಸಂಘ ಸಂಸ್ಥೆಗಳ ಸಹಕಾರದೊಂದಿದೆ ಈ ಹಿಂದೆ ಇಂಡಿಯನ್ ಸ್ವಚ್ಚತಾ ಲೀಗ್ ಸೀಸನ್-1 ಹೊಳಲ್ಕೆರೆ ಪಟ್ಟಣದವನ್ನು ರಾಷ್ಟ್ರ ಮಟ್ಟದಲ್ಲಿ ಹೆಸರು ಮಾಡಲು ಸಹಕಾರಿಯಾಗಿದ್ದು ಈ ಬಾರಿಯು ಇಂಡಿಯನ್ ಸ್ವಚ್ಚತಾ ಲೀಗ್ ಸೀಸನ್-2 ಪಾಲ್ಗೊಂಡಿರುವ ಮಾನ್ಯ ಶಾಸಕರು, ತಾಲ್ಲೂಕು ದಂಡಾಧಿಕಾರಿಗಳಿಗೆ ಎಲ್ಲಾ ಇಲಾಖೆ ಹಾಗೂ ಸಂಘ ಸಂಸ್ಥೆಯವರಿಗೆ ಧನ್ಯವಾದಗಳನ್ನು ತಿಳಿಸಿ ನಿಮ್ಮ ಸಹಯೋಗದೊಂದಿಗೆ ಮತ್ತೊಮ್ಮೆ ಹೊಳಲ್ಕೆರೆ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿಯನ್ನ ಪಡೆಯಲು ಶ್ರಮಿಸುತ್ತೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪ ವಿಭಾಗಧಿಕಾರಿಗಳು ಮತ್ತು ಪುರಸಭೆ ಆಡಳಿತಧಿಕಾರಿ ಎಂ.ಕಾರ್ತಿಕ್ , ಪುರಸಭೆ ಸದಸ್ಯರಾದ ಹೆಚ್.ಆರ್.ನಾಗರತ್ನ ವೇದಮೂರ್ತಿ, ಪಿ.ಎಸ್.ಮಲ್ಲಿಕಾರ್ಜುನ, ಡಿ.ಎಸ್.ವಿಜಯ,ಬಿ.ಎಸ್.ರುದ್ರಪ್ಪ,ವಿಜಯ ಸಿಂಹ ಖಾಟ್ರೋತ್, ಮಮತ ಜಯಸಿಂಹ ಖಾದ್ರೋತ್, ಪಿ.ಹೆಚ್.ಮುರುಗೇಶ್, ಆರ್.ಎ.ಅಶೋಕ್, ಕೆ.ಸಿ.ರಮೇಶ್, ಶಭೀನ ಆಶ್ರಫ್, ಸೈಯದ್ ನಜೀಲ್, ಸೈಯದ್ ಮನ್ಸೂರ್, ಪೂರ್ಣಿಮಾ ಬಸವರಾಜ್, ಸುಧಾ ಬಸವರಾಜ್, ಸವಿತಾ ನರಸಿಂಹ ಖಾಟ್ರೋತ್, ವಸಂತ ರಾಜಪ್ಪ, ಪುರಸಭೆ ಮುಖ್ಯಾಧಿಕಾರಿಗಳಾದ ವಿ.ಪಾಪಿಂ, ಪೋಲಿಸ್ ಉಪ ನಿರೀಕ್ಷಕರಾದ ಸುರೇಶ್ ಮತ್ತು ಸಿಬ್ಬಂದಿಗಳು, ಆರೋಗ್ಯ ಇಲಾಖೆ ಚಂದ್ರಣ್ಣ ಮತ್ತು ಸಿಬ್ಬಂದಿಗಳು, ಸಮಾಜಕಲ್ಯಾಣ ಇಲಾಖೆ ಸಿಬ್ಬಂದಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಖಾದರ್ ಭೀ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಕಿರಾಣಿ ವರ್ತಕರ ಸಂಘದ ಉಜ್ವಲ್, ಕಾಶಿನಾಥ್ ಮತ್ತು ಇತರೆ ಸದಸ್ಯರು, ಪುರಸಭೆ ಪೌರಕಾರ್ಮಿಕರು ಹಾಗೂ ಸಿಬ್ಬಂದಿ ವರ್ಗ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ತಡರಾತ್ರಿ ಸಭೆ

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಮಾತುಕತೆ ಹಿನ್ನೆಲೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ದೆಹಲಿಯಲ್ಲಿ ತಡರಾತ್ರಿ ಸಭೆ ನಡೆಸಿದರು. ಹಳೇ ಮೈಸೂರು ಭಾಗದಲ್ಲಿ ಲೋಕಸಭೆ ತಂತ್ರಗಾರಿಕೆ ಕುರಿತು ಸುದೀರ್ಘ ಮಾತುಕತೆ ನಡೆಸಲಾಯಿತು. ಸಚಿವ ಚಲುವರಾಯಸ್ವಾಮಿ, ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಮತ್ತು ಕೆಲ ಪ್ರಮುಖ ನಾಯಕರು ಕೂಡ ಸಭೆಯಲ್ಲಿ ಭಾಗಿಯಾಗಿದ್ದರು. ಅಲ್ಲದೆ, ಒಕ್ಕಲಿಗರು ಪ್ರಬಲವಾಗಿರುವ ಕ್ಷೇತ್ರಗಳಲ್ಲಿ ತಂತ್ರಗಾರಿಕೆ ಕುರಿತು ಚರ್ಚೆ ನಡೆಸಲಾಯಿತು. ಜೆಡಿಎಸ್ ಎಲ್ಲೆಲ್ಲಿ ಸ್ಪರ್ಧೆ ಮಾಡಬಹುದು ಎಂಬ ಮಾಹಿತಿ ಸಂಗ್ರಹ ಮಾಡಲಾಯಿತು. ಅಲ್ಲದೆ, ಎಆಖ, ಬಿಜೆಪಿ ಮೈತ್ರಿ ಮಣಿಸಲು ಪ್ರಬಲ ಅಭ್ಯರ್ಥಿ ಕಣಕ್ಕಿಳಿಸುವ ಬಗ್ಗೆ ಚರ್ಚೆ ಕೂಡ ನಡೆದಿದೆ ಎನ್ನಲಾಗುತ್ತಿದೆ.

### ದೆಹಲಿಯತ್ತ ಹೊರಟ ಮಾಜಿ ಸಚಿವ ರಮೇಶ್ ಜಾರಕಿಹೊಳಿ

ದೇವನಹಳ್ಳಿ: ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಅವರು ದೆಹಲಿಯತ್ತ ಪ್ರಯಾಣ ಬೆಳೆಸಿದ್ದಾರೆ. ಕೆಂಪೇಗೌಡ ಏರ್ಪೋರ್ಟ್‌ನಿಂದ ದೆಹಲಿಗೆ ಪ್ರಯಾಣ ಗೈಗೊಂಡಿದ್ದಾರೆ. ಈ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡದೆ ತೆರಳಿದರು.

### ಅವಶ್ಯಕತೆ ಬಿದ್ದರೆ ಪ್ರಧಾನಿ ಮೋದಿ, ದೇವೇಗೌಡ ಚರ್ಚೆ; ಕುಮಾರಸ್ವಾಮಿ



ಮೈತ್ರಿ ವಿಚಾರವಾಗಿ ಬೆಂಗಳೂರಿನಲ್ಲಿ ಮಾತನಾಡಿದ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ, ಬಿಜೆಪಿ-ಜೆಡಿಎಸ್ ಮೈತ್ರಿ ವಿಚಾರವಾಗಿ ನಾಳೆ ಮಾತನಾಡುತ್ತೇನೆ. ಎಷ್ಟು ಸೀಟ್ ಅಂತಾ ನಾವು ಚರ್ಚಿಸಿಲ್ಲ, ಬಿಜೆಪಿಯೂ ಚಿಂತನೆ ಮಾಡಿಲ್ಲ. 28 ಕ್ಷೇತ್ರದ ಇಂದಿನ ಪರಿಸ್ಥಿತಿ ಅವಲೋಕಿಸಿ ಚರ್ಚೆ ಮಾಡುತ್ತೇವೆ. ಮೈತ್ರಿ ವಿಚಾರವಾಗಿ ಸಂಜೆ ಅಮಿತ್ ಶಾ, ಜೆಪಿ ನಡ್ಡಾ ಜೊತೆ ಚರ್ಚೆ ಮಾಡುವೆ. ಅವಶ್ಯಕತೆ ಬಿದ್ದರೆ ಪ್ರಧಾನಿ ಮೋದಿ, ದೇವೇಗೌಡರು ಚರ್ಚಿಸುತ್ತಾರೆ ಎಂದರು.

### ಬಿಜೆಪಿ-ಜೆಡಿಎಸ್ ಮೈತ್ರಿ ಮಾತುಕತೆ: ದೆಹಲಿಗೆ ತೆರಳಲಿರುವ ಕುಮಾರಸ್ವಾಮಿ

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ವಿಚಾರ ಮಾತುಕತೆ ನಡೆಸಲು ಇಂದು ಬೆಳಗ್ಗೆ 9.30ಕ್ಕೆ ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ಅವಯಾಗಿ ಲೋಕಸಭಾ ಚುನಾವಣೆ ಸೀಟು ಹಂಚಿಕೆ ಬಗ್ಗೆ ಸಮಾಲೋಚನೆ ನಡೆಸಲಿದ್ದಾರೆ. ಸದ್ಯ ಜೆಡಿಎಸ್ ನಾಲ್ಕು ಕ್ಷೇತ್ರಗಳ (ಮಂಡ್ಯ, ಹಾಸನ, ಕೋಲಾರ, ತುಮಕೂರು) ಬೇಡಿಕೆ ಮುಂದಿಟ್ಟಿದೆ. ತುಮಕೂರು ಲೋಕಸಭಾ ಕ್ಷೇತ್ರದ ವಿಚಾರ ಇನ್ನೂ ಅಂತಿಮವಾಗಿಲ್ಲ. ಇಂದಿನ ಚರ್ಚೆ ವೇಳೆ ಸೀಟು ಹಂಚಿಕೆ ಬಗ್ಗೆ ಅಂತಿಮ ತೀರ್ಮಾನ ಆಗುವ ಸಾಧ್ಯತೆ ಇದೆ. ನಾಳೆ ಅಥವಾ ನಾಡಿದ್ದು ಉಭಯ ಪಕ್ಷಗಳಿಂದ ಜಂಟಿ ಸುದ್ದಿಗೋಷ್ಠಿ ನಡೆಸುವ ಸಾಧ್ಯತೆ ಇದೆ.

### ಗಣಪತಿ ವಿಸರ್ಜನೆ: ಮದ್ಯ ಮಾರಾಟ ನಿಷೇಧ


ಚಿತ್ರದುರ್ಗ: ಜಿಲ್ಲೆಯಲ್ಲಿ ಪ್ರತಿಷ್ಠಾಪಿಸಲಾಗಿರುವ ಪ್ರಮುಖ ಗಣಪತಿಗಳ ವಿಸರ್ಜನಾ ಮೆರವಣಿಗೆ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಮುಂಜಾಗ್ರತಾ ಕ್ರಮದ ಸಲುವಾಗಿ ಗಣಪತಿ ವಿಸರ್ಜನೆ ನಡೆಯುವ ಸ್ಥಳಗಳ ಸುತ್ತಮುತ್ತಲಿನ 10 ಕಿ.ಮೀ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶಿಸಿದ್ದಾರೆ. ಪ್ರಮುಖ ಗಣೇಶ ವಿಸರ್ಜನೆಯ ದಿನಾಂಕಗಳ ವಿವರ ಇಂತಿದೆ. ಸೆ.24ರಂದು ಮೊಳಕಾಲ್ಮೂರು ಪಟ್ಟಣ, ಸೆ.26ರಂದು ಹೊಸದುರ್ಗ ಪಟ್ಟಣ, ಸೆ.27ರಂದು ಭರಮಸಾಗರ ಗ್ರಾಮ ಹಾಗೂ ನಾಯಕನಹಟ್ಟಿ ಪಟ್ಟಣ, ಸೆ.30ರಂದು ಹೊಳಲ್ಕೆರೆ ಪಟ್ಟಣ, ಹೊಸದುರ್ಗ ಪಟ್ಟಣ ಹಾಗೂ ಚಳ್ಳಕೆರೆ ನಗರ, ಅಕ್ಟೋಬರ್ 01ರಂದು ಹಿರಿಯೂರು ನಗರ , ಅ.08ರಂದು ಚಿತ್ರದುರ್ಗ ನಗರದಲ್ಲಿ ಪ್ರತಿಷ್ಠಾಪಿಸಲಾಗಿರುವ ಹಿಂದೂ ಮಹಾ ಗಣಪತಿ ವಿಸರ್ಜನಾ ಮೆರವಣಿಗೆ ನಡೆಯಲಿದೆ. ಈ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಠಿಯಿಂದ ವಿಸರ್ಜನೆ ನಡೆಯುವ ಸ್ಥಳದ ಸುತ್ತಮುತ್ತಲಿನ 10 ಕಿ.ಮೀ ವ್ಯಾಪ್ತಿಯಲ್ಲಿ ವಿಸರ್ಜನಾ ದಿನಾಂಕಗಳಂದು ಬೆಳಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ದಿವ್ಯಪ್ರಭು ಆದೇಶ ಹೊರಡಿಸಿದ್ದಾರೆ.

---

**ಹೊಳಲ್ಕೆರೆ ತಾಲ್ಲೂಕು ಶಿವಗಂಗಾ ಗ್ರಾಮ ಪಂಚಾಯಿತಿಗೆ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ದಿಢೀರ್ ಭೇಟಿ**

# ನರೇಗಾ ಕಡತ ಪರಿಶೀಲಿಸಿದ ಜಿಪಂ ಸಿಇಒ

» ಚಿತ್ರದುರ್ಗ



ಹೊಳಲ್ಕೆರೆ ತಾಲ್ಲೂಕು ಶಿವಗಂಗಾ ಗ್ರಾಮ ಪಂಚಾಯಿತಿಗೆ ಬುಧವಾರ ಸಂಜೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಭೇಟಿ ನೀಡಿ, ಮಹಾತ್ಮಾ ಗಾಂಧಿ ನರೇಗಾ ಯೋಜನೆಗೆ ಸಂಬಂಧಿಸಿದ ಕಡತಗಳನ್ನು ಪರಿಶೀಲಿಸಿದರು.

ನರೇಗಾ ಯೋಜನೆಯ ಮಾರ್ಗಸೂಚಿ ಅನ್ವಯ 21 ಚೆಕ್‌ಲೀಸ್ಟ್ ಪ್ರಕಾರವೇ ಕಡತದಲ್ಲಿ ನಿರ್ವಹಿಸಿರಬೇಕು. ಇದನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಕೆಲಸದ ಅನುಷ್ಠಾನದ ನಂತರ ಕಡತಗಳನ್ನು ಪ್ರತಿದಿನ ಪರಿಶೀಲಿಸಬೇಕು ಎಂದು ನರೇಗಾ ಸಹಾಯಕ ನಿರ್ದೇಶಕರಿಗೆ ಎಚ್ಚರಿಕೆ ನೀಡಿದ ಅವರು, ಒಂದು ವಾರದೊಳಗೆ ಸರಿಪಡಿಸಿಕೊಳ್ಳಬೇಕು. ನಿರ್ವಹಿಸದಿದ್ದ ಪಕ್ಷದಲ್ಲಿ ನೇರವಾಗಿ ನಿಮ್ಮ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ನರೇಗಾ ಯೋಜನೆಯ ಪ್ರಯೋಜನೆಯನ್ನು ಅರ್ಹರೆಲ್ಲರೂ ತಲುಪಿಸುವಂತೆ ಸೂಚನೆ ನೀಡಿದರು.

ನಂತರ ಹೊಸ ಜಾಬ್ ಕಾರ್ಡ್‌ಗೆ ಬಂದಿರುವ ಬೇಡಿಕೆಗಳನ್ನು ಪರಿಶೀಲಿಸಿದರು. ಗ್ರಾಮದಲ್ಲಿ ಯಾವ ಕುಟುಂಬಕ್ಕೆ ಜಾಬ್ ಕಾರ್ಡ್ ಇಲ್ಲವೋ ಅಂತಹ ಕುಟುಂಬಗಳಿಗೆ ತುರ್ತಾಗಿ ಜಾಬ್ ಕಾರ್ಡ್ ನೀಡಿ, ಹಾಗೇ ಅವರಿಗೆ ಉದ್ಯೋಗ ನೀಡುವುದು ಅಷ್ಟೇ ಜವಾಬ್ದಾರಿ. ಜಾಬ್ ಕಾರ್ಡ್ ಇರುವ ಕೆಲಸ ಕೇಳಿಕೊಂಡು ಬಂದ ಕುಟುಂಬಗಳಿಗೆ ಮೊದಲು ಕೆಲಸ ನೀಡಿ, ಗ್ರಾಮ ಪಂಚಾಯಿತಿಗಳು ಸರಿಯಾದ ಸಮಯಕ್ಕೆ ಕೆಲಸ ನೀಡದಿದ್ದರೆ ಅವರು ಜಿಲ್ಲಾ ಪಂಚಾಯತ್ ಕಚೇರಿಗೆ ಬಂದು ಗ್ರಾಮ ಪಂಚಾಯತಿಯವರು ಕೆಲಸ ಕೊಡುತ್ತಿಲ್ಲ ಎನ್ನುತ್ತಾರೆ. ಈ ರೀತಿ ಆಗದಂತೆ ಎಚ್ಚರಿಕೆಯಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೆಲಸ ನಿರ್ವಹಿಸುವುದು ಕಡ್ಡಾಯ ಎಂದರು.ಜಿಲ್ಲೆಯ ಆರು ತಾಲ್ಲೂಕುಗಳನ್ನು ಬರ ಪೀಡಿತ ತಾಲ್ಲೂಕುಗಳು ಎಂದು ಘೋಷಣೆ ಮಾಡಲಾಗಿದೆ. ಇದನ್ನು ಅರಿತುಕೊಂಡು ಕೂಲಿಗಾರರಿಗೆ ತಮ್ಮ ತಮ್ಮ ಗ್ರಾಮಗಳಲ್ಲೆ ಕೆಲಸ ನೀಡಿ ಹಾಗೂ ಸರಿಯಾದ ಸಮಯಕ್ಕೆ ಕೂಲಿ ಹಣ ಪಾವತಿ ಮಾಡಿ. ನಂತರ ನರೇಗಾ ವೆಬ್‌ಸೈಟ್ ಪರಿಶೀಲಿಸಿ, ಎಂಐಎಸ್ ತಂತ್ರಾಂಶಕ್ಕೆ ಸಂಬಂದಿಸಿದ ಹಾಗೂ ಸಾಮಾಜಿಕ ಲೆಕ್ಕ ಪರಿಶೋಧನೆಯ ಬಗ್ಗೆ ಮಾಹಿತಿಯನ್ನು ಪಡೆದುಕೊಂಡು ನರೇಗಾ ಯೋಜನೆಯ ನಿಯಮನುಸಾರ ಮತ್ತು ಗ್ರಾಮ ಪಂಚಾಯಿತಿಗಳ ಜನಪ್ರತಿನಿದಿಗಳ ಜೊತೆ ಸಮನ್ವಯತೆಯಿಂದ ಕೆಲಸ ನಿರ್ವಹಿಸುವಂತೆ ತಿಳಿಸಿದರು. ಹಾಗೆಯೇ ಇ-ಸ್ವತ್ತು, ಪಂಚತಂತ್ರ, ಸಕಾಲದ ಬಗ್ಗೆ ಮಾಹಿತಿ ಪಡೆದರು.

ಗ್ರಾಮ ಪಂಚಾಯಿತಿ ವ್ಯಾಪಿಯಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಆಗದಂತೆ ಕ್ರಮ ವಹಿಸಬೇಕು. ಅದೇ ರೀತಿಯಾಗಿ ಜಾನುವಾರುಗಳಿಗೆ ಮೇವಿನ ತೊಂದರೆ ಆಗದಂತೆ ನೋಡಿಕೊಳ್ಳಿ ಎಂದರು.

ಗ್ರಾಮಗಳ ನೈರ್ಮಲ್ಯ ಹಾಗೂ ಕಸ ವಿಲೇವಾರಿ ವ್ಯವಸ್ಥೆಯ ಬಗ್ಗೆ ನಿಗಾ ವಹಿಸಬೇಕು. ಕುಡಿಯುವ ನೀರಿನ ಟ್ಯಾಂಕ್ ಮತ್ತು ಆರ್.ಓ ಪ್ಲಾಂಟ್‌ಗಳ ಶುಚಿತ್ವ ಬಗ್ಗೆ ಮಾಹಿತಿ ಪಡೆದರು. ಸಾರ್ವಜನಿಕರಿಗೆ ಶುದ್ಧವಾದ ನೀರು ಒದಗಿಸುವುದು ನಮ್ಮೆಲ್ಲರ ಕರ್ತವ್ಯ. ಇದರಲ್ಲಿ ಲೋಪಗಳಾದಲ್ಲಿ ತಮ್ಮಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಮಕ್ಕಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಗ್ರಂಥಾಲಯವನ್ನು ನಿಯಮಾನಸಾರ ಸಮಯಕ್ಕೆ ಸರಿಯಾಗಿ ತೆಗೆಯುವಂತೆ ಸೂಚಿಸಿದರು. ಅಧ್ಯಕ್ಷರು ಮತ್ತು ಕೆಲ ಸದಸ್ಯರ ಜೊತೆ ಗ್ರಾಮದ ಬಗ್ಗೆ ಚರ್ಚಿದರು. ಜನಪ್ರತಿನಿಧಿಗಳ ಕರ್ತವ್ಯಗಳ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಗಳು, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು, ಎ ಡಿ ಪಿ ಸಿ, ಜಿಲ್ಲಾ ಐ ಇ ಸಿ ಸಂಯೋಜಕರು, ಸಹಾಯಕ ನಿರ್ದೇಶಕರು (ನರೇಗಾ ಮತ್ತು ಪಂಚಾಯತ್ ರಾಜ್) ತಾಂತ್ರಿಕ ಸಂಯೋಜಕರು, ತಾಲ್ಲೂಕು ಎಂಐಎಸ್, ತಾಲ್ಲೂಕು ಐಇಸಿಪಿಡಿಒ, ಟಿಎಇ ಗಳು, ಗ್ರಾಮ ಪಂಚಾಯತಿಯ ಸಿಬ್ಬಂದಿಗಳು ಇದ್ದರು.

---

# ಮುಸ್ಲಿಂರಿಗೆ ಮಾಹಿತಿ ಕೊರತೆ, ಸವಲತ್ತು ಮರೀಚಿಕೆ

» ದಾವಣಗೆರೆ




ಮುಸ್ಲಿಂ ಸಮುದಾಯವು ಬಡತನದ ಕಾರಣದಿಂದಾಗಿ ಶಾಲೆಯಿಂದ ಹೊರಗುಳಿದಿರುವ ಕಾರಣ ಮಾಹಿತಿ ಕೊರತೆಯಿಂದಾಗಿ ಸರ್ಕಾರದ ಸೌಲಭ್ಯಗಳ ಬಗ್ಗೆ ಅರವಿನ ಕೊರತೆಯಿಂದಾಗಿ ಇಂದಿಗೂ ಸಹ ಅವರಿಗೆ ಸರ್ಕಾರದ ಸೌಲತ್ತುಗಳು ಮರೀಚಿಕೆ ಆಗಿವೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್ ಅಭಿಪ್ರಾಯಪಟ್ಟರು.

ನಗರದ ರೋಟರಿ ಬಾಲ ಭವನದಲ್ಲಿ ನೆರಳುಬೀಡಿ ಕಾರ್ಮಿಕರ ಯೂನಿಯನ್ ದಾವಣಗೆರೆ, ದಲಿತ ಮುಸ್ಲಿಂ ಒಕ್ಕೂಟ ದಾವಣಗೆರೆ ಇವರ ಸಂಯುಕ್ತ ಆಶ್ರಯದಲ್ಲಿ ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವತಿಯಿಂದ ಆಯೋಜಿಸಲಾಗಿದ್ದ ಮುಸ್ಲಿಂ ಸಮುದಾಯಕ್ಕೆ ಇರುವ ಸರ್ಕಾರಿ ಸೌಲಭ್ಯಗಳ ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತದಲ್ಲಿ ಮುಸ್ಲಿಂ ಸಮುದಾಯ ಅತಿದೊಡ್ಡ ಧಾರ್ಮಿಕ ಅಲ್ಪಸಂಖ್ಯಾತ ಸಮುದಾಯ. ಅವರು ತಮ್ಮ ಧಾರ್ಮಿಕ ಸಂಪ್ರದಾಯದಿಂದಾಗಿ ಶಿಕ್ಷಣದಿಂದ ದೂರ ಉಳಿದಿರುವುದೇ ಪ್ರಮುಖ ಅಂಶವಾಗಿದೆ ಎಂಬ ಗ್ರಹಿಕೆ ತಪ್ಪಾಗಿದೆ ಎಂದು ಅನೇಕ ವರದಿಗಳು ಹೇಳಿವೆ. ಅನೇಕ ಭಾರತೀಯರಂತೆ ಮುಸ್ಲಿಮರಲ್ಲಿ ಶಿಕ್ಷಣದಿಂದ ಹಿಂದುಳಿಯಲು ಅವರ ಕಡುಬಡತನಕ್ಕೆ ಕಾರಣವಾಗಿದೆ ಎಂದರು.ಸರ್ಕಾರದ ಇಲಾಖೆಗಳಿಂದ ಸಿಗಲಾಗುವ ಸೌಲಭ್ಯಗಳ ಬಗ್ಗೆ ಇಲಾಖೆಗಳು ಜಾಗೃತಿ ಮೂಡಿಸಬೇಕು. ಅದರಲ್ಲೂ ಸಮಾಜದ ಮುಖ್ಯ ವಾಹಿನಿಗೆ ಬರಲಾರದ ಅಲ್ಪಸಂಖ್ಯಾತರನ್ನು ಗುರುತಿಸಿ ಸರ್ಕಾರದ ಇಲಾಖೆಗಳು ಅವರಿಗೆ ಸೂಕ್ತ ಶಿಕ್ಷಣ ನೀಡುವ ಮೂಲಕ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರಬೇಕಾಗಿದೆ ಎಂದು ಹೇಳಿದರು.

ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ದಾವಣಗೆರೆ ಜಿಲ್ಲಾ ವ್ಯವಸ್ಥಾಪಕ ಸೈಯದ್ ಜುನೆದ್ ಪಾಷಾ ಮಾತನಾಡಿ, ಅಲ್ಪಸಂಖ್ಯಾತರ ಎಂದರೆ ಕೇವಲ ಮುಸ್ಲಿಂ ಸಮುದಾಯ ಮಾತ್ರ ಅಲ್ಲ. ಹಲವಾರು ಜಾತಿಗಳಿವೆ ಇವರಿಗೆ ಶಿಕ್ಷಣದ ಕೊರತೆ ಇದಕ್ಕೆಲ್ಲ ಕಾರಣ ಕಾರಣ ಇಂತಹ ಕೀಳರಮೆಯನ್ನು ತೊಡೆದು ಹಾಕಿ ನೀವು ಸಮಾಜದ ಮುಖ್ಯ ವಾಹಿನಿಗೆ ಬರಬೇಕು ಎಂದು ಕರೆ ನೀಡಿದರು.ಸಮಾರಂಭದ ಅಧ್ಯಕ್ಷತೆಯನ್ನು ನೆರಳು ಬೀಡಿ ಕಾರ್ಮಿಕರ ಸಂಘದ ಅಧ್ಯಕ್ಷೆ ಜಬೀನಾ ಖಾನಂ ವಹಿಸಿದ್ದರು. ವೇದಿಕೆಯಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ಮಲ್ಲಿಕಾರ್ಜುನ ಮಠದ, ದಲಿತ ಮುಸ್ಲಿಂ ಮಹಿಳಾ ಒಕ್ಕೂಟದ ಅಧ್ಯಕ್ಷ ನಾಹೇರಬಾನು, ನೆರಳುಬೀಡಿ ಕಾರ್ಮಿಕರ ಸಂಘದ ಯೂನಿಯನ್ ನ ಇಸಿ ಸದಸ್ಯೆ ರುಕ್ಷನಾಬಾನು. ಪ್ರಧಾನ ಕಾರ್ಯದರ್ಶಿ ಎಂ.ಕರಿಬಸಪ್ಪ ಇದ್ದರು.

---

# ಹಣ್ಣಿನ ದಿನಾಚರಣೆ: ವೃದ್ಧಾಶ್ರಮ ಹಾಗೂ ಕಿವುಡ ಮೂಗರ ಶಾಲೆಯ ಮಕ್ಕಳಿಗೆ ಹಣ್ಣುಗಳ ವಿತರಣೆ



» ಚಳ್ಳಕೆರೆ

ಇಂದು ನಾಡಿನಾದ್ಯಂತ ವಿಶೇಷವಾಗಿ ಹಣ್ಣಿನ ದಿನಾಚರಣೆ ಹಿನ್ನೆಲೆಯಲ್ಲಿ ವಿವಿಧ ಹಣ್ಣುಗಳನ್ನು ನಗರದ ವೃದ್ಧಾಶ್ರಮ ಹಾಗೂ ಕಿವುಡ, ಮೂಗರ ಶಾಲೆಗೆ ಉಚಿತವಾಗಿ ವಿತರಣೆ ಮಾಡುವ ಮೂಲಕ ಕಾರ್ಯಕ್ರಮವನ್ನು ಸರಳವಾಗಿ ಆಚರಣೆ ಮಾಡಲಾಯಿತು ಎಂದು ಇಂಡಸ್ ವ್ಯಾಲಿ ಶಾಲೆಯ ಆಡಳಿತಾಧಿಕಾರಿ ಚಿಕ್ಕಣ್ಣ ತಿಳಿಸಿದರು.

ಅವರು, ವೆಂಕಟೇಶ್ವರ ನಗರದ ಬೆಳಕು ಕಿವುಡ-ಮೂಗರ ಶಾಲೆಯ ಮಕ್ಕಳಿಗೆ ಉಚಿತವಾಗಿ ವಿವಿಧ ರೀತಿಯ ಹಣ್ಣುಗಳನ್ನು ವಿತರಿಸಿ ಮಾತನಾಡಿದರು. ಪ್ರತಿಯೊಬ್ಬ ವ್ಯಕ್ತಿಯೂ ನಿತ್ಯದ ಆಹಾರ ಜೊತೆಯಲ್ಲಿ ಹಣ್ಣುಗಳನ್ನು ಸೇವಿಸಿದರೆ ಆರೋಗ್ಯ ಸುಧಾರಣೆಯಲ್ಲದೆ, ಸದೃಢ ಆರೋಗ್ಯ ಹೊಂದಲು ಸಹಕಾರಿಯಾಗಲಿದೆ. ಹಣ್ಣುಗಳನ್ನು ವಿಶೇಷವಾದ ಪೋಷಕಾಂಶಗಳಿದ್ದು, ಇವುಗಳು ನಮಗೆ ಉತ್ತಮ ಶಕ್ತಿ ಹಾಗೂ ಚೈತನ್ಯವನ್ನು ನೀಡಲಿವೆ ಎಂದರು. ಇದೇ ಸಂದರ್ಭದಲ್ಲಿ ಬೆಂಗಳೂರು ರಸ್ತೆಯಲ್ಲಿರುವ ವೃದ್ಧಾಶ್ರಮಕ್ಕೆ ವಾಗ್ದೇವಿ ವಿದ್ಯಾಸಂಸ್ಥೆ ವತಿಯಿಂದಲೂ ಸಹ ಉಚಿತವಾಗಿ ಹಣ್ಣು ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿ.ಎಸ್.ಗಣೇಶ್, ರಾಜೇಶ್ವರಿ, ಚಂದ್ರಕಲಾ, ಪುಷ್ಪ ಮುಂತಾದವರು ಉಪಸ್ಥಿತರಿದ್ದರು.



**ಚಳ್ಳಕೆರೆ ತಾಲ್ಲೂಕಿನ ವರವಿನಾರಹಟ್ಟಿಯಲ್ಲಿ ಬುಧವಾರ ರಾತ್ರಿ ಆಕಸ್ಮಿಕ ಬೆಂಕಿಯಿಂದ ಮನೆ ಕಳೆದುಕೊಂಡ ಕುಟುಂಬಕ್ಕೆ ಪಾವಗಡದ ಶ್ರೀರಾಮಕೃಷ್ಣ ಸೇವಾಶ್ರಮದ ಜಪಾನಂದಸ್ವಾಮೀಜಿ ನೀಡಿದ ವಸ್ತುಗಳನ್ನು ಸಂಯೋಜಕ ಸಿ.ಪಿ.ಮಹೇಶ್ ನಿರಾಶಿತ ಕುಟುಂಬಕ್ಕೆ ಗುರುವಾರ ಹಸ್ತಾಂತರಿಸಿದರು.**

---

# ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಆನ್‌ಲೈನ್ ನೊಂದಣಿ

» ಚಿತ್ರದುರ್ಗ




01 ಏಪ್ರಿಲ್ 2019ರ ನಂತರ ನೊಂದಣಿ ಮಾಡಿಕೊಂಡ ಎಲ್ಲಾ ವಿಧದ ವಾಹನಗಳಿಗೆ ನವೆಂಬರ್ 17ರ ಒಳಗಾಗಿ ಹೆಚ್‌ಎಸ್‌ಆರ್‌ಪಿ (ಹೈ-ಸೆಕ್ಯುರಿಟಿ ರಿಜಿಸ್ಟ್ರೇಷನ್ ಪ್ಲೇಟ್ಸ್) ನಂಬರ್ ಪ್ಲೇಟ್ ಅಳವಡಿಸುವುದು ಕಡ್ಡಾಯವಾಗಿದೆ. ವಾಹನ ಮಾಲೀಕರು ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಪಡೆಯಲು ಕರ್ನಾಟಕ ಸಾರಿಗೆ ಇಲಾಖೆವೆಬ್‌ಸೈಟ್ https://transport.karnataka.gov.in CxÀªÁ www.siam.in ಭೇಟಿ ನೀಡಿ, ವೆಬ್‌ಸೈಟ್‌ನಲ್ಲಿ ವಾಹನದ ಉತ್ಪಾದಕ ಕಂಪನಿ ಹಾಗೂ ಇತರೆ ಮೂಲಭೂತ ಮಾಹಿತಿಗಳನ್ನು ಭರ್ತಿ ಮಾಡಬೇಕು. ಹತ್ತಿರ ಡೀಲರ್ ಸ್ಥಳವನ್ನು ನಿಗದಿ ಮಾಡಿಕೊಂಡು, ಆನ್‌ಲೈನ್ ಮೂಲಕವೇ ಹಣ ಪಾವತಿಸಿಬೇಕು. ನಂತರ ವಾಹನ ಮಾಲೀಕರ ಮೊಬೈಲ್ ನಂಬರ್‌ಗೆ ಬರುವ ಒಟಿಪಿ ಮಾಹಿತಿ ನಮೂದಿಸಿ, ದಿನಾಂಕ ಹಾಗೂ ಸಮಯ ನಿಗದಿ ಮಾಡಿಕೊಂಡು ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಿಕೊಳ್ಳಬಹುದು.

ಸಾರಿಗೆ ಇಲಾಖೆಯಿಂದ ಗುರುತಿಸಿದ ಮೂಲ ವಾಹನ ಉತ್ಪಾದನಕ ಕಂಪನಿಗಳು ಹಾಗೂ ಅಧಿಕೃತ ವಾಹನ ಡೀಲರ್‌ಗಳು ಮಾತ್ರ ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಲು ಮಾನ್ಯತೆ ಹೊಂದಿರುತ್ತಾರೆ.

ವಾಹನ ಮಾಲೀಕರು ವೆಬ್‌ಸೈಟ್ ಮೂಲಕವೇ ನೊಂದಣಿ ಮಾಡಿಕೊಂಡುಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ವಾಹನಗಳಿಗೆ ಅಳವಡಿಸಿಕೊಳ್ಳುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಕಾಳಿ ಸಿಂಗೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ತಮಿಳುನಾಡಿಗೆ ನೀರು; ಸಿಎಂ ನಿರ್ಧಾರಕ್ಕೆ ಬದ್ಧ: ಮಧು

» ಚಿತ್ರದುರ್ಗ



ಕಾವೇರಿ ನೀರಿನ ಸಂಬಂದಪಟ್ಟಂತೆ ತಮಿಳುನಾಡಿಗೆ ನೀರನ್ನು ಬಿಡುಗಡೆಯ ವಿಚಾರದಲ್ಲಿ ಕೇಂದ್ರ ಸರ್ಕಾರ ಮಧ್ಯ ಪ್ರವೇಶ ಮಾಡಿ ನೀರಿನ ಸಮಸ್ಯೆಯನ್ನು ಬಗೆಹರಿಸಬೇಕಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಮದು ಬಂಗಾರಪ್ಪ ತಿಳಿಸಿದರು.

ಚಿತ್ರದುರ್ಗಕ್ಕೆ ಭೇಟಿ ನೀಡಿದ್ದ ಅವರನ್ನು ಕಾಂಗ್ರೆಸ್ ಕಚೇರಿಯಲ್ಲಿ ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿ, ಬಂಗಾರಪ್ಪರವರು ಮುಖ್ಯಮಂತ್ರಿಗಳಾಗಿದ್ದಾಗ ಇದ್ದ ಪರಿಸ್ಥಿತಿ ಬೇರೆ ಈಗಿನ ಪರಿಸ್ಥಿತಿ ಬೇರೆಯಾಗಿದೆ. ಆಗ ಯಾವುದೇ ರೀತಿಯ ನ್ಯಾಯ ಮಂಡಳಿಗಳು ಇರಲಿಲ್ಲ ನ್ಯಾಯಾಲಯಕ್ಕೆ ಹೋಗುವವರು ಇರಲಿಲ್ಲ ಆದರೆ ಈಗ ಮಂಡಳಿ ಇದೆ ಸ್ವಲ್ಪ ವ್ಯತ್ಯಾಸವಾದರೂ ಸಹಾ ನ್ಯಾಯಾಲಯದ ಮೊರೆ ಹೋಗುವವರ ಸಂಖ್ಯೆ ಹೆಚ್ಚಾಗಿದೆ. ನಾವುಗಳು ಮತ್ತು ಶಾಸಕರೆಲ್ಲರು ಮುಖ್ಯಮಂತ್ರಿಗಳಿಗೆ ಬೆಂಬಲವನ್ನು ನೀಡಿದ್ದೇವೆ ಅವರು ಸಮಸ್ಯೆಯನ್ನು ಪರಿಹಾರ ಮಾಡುತ್ತಾರೆ ಎಂಬ ನಂಬಿಕೆ ಇದೆ ಎಂದರು.

ಕಾವೇರಿ ನೀರಿನ ವಿವಾದಕ್ಕೆ ಸಂಬಂಧಪಟ್ಟಂತೆ ಎರಡು ರಾಜ್ಯದವರ ಮಧ್ಯ ಕೇಂದ್ರ ಸರ್ಕಾರ ಪ್ರವೇಶವನ್ನು ಮಾಡುವುದರ ಮೂಲಕ ಈ ಸಮಸ್ಯೆಯನ್ನು ಪರಿಹಾರ ಮಾಡಬೇಕಿದೆ. ಡ್ಯಾಂನಲ್ಲಿ ನೀರಿಲ್ಲ ಆದರೂ ನೀರನ್ನು ಕೂಡಿ ಎಂದರೆ ಹೇಗೆ ಕಣ್ಣ ಮುಂದೆ ಡ್ಯಾಂನ ಚಿತ್ರಣ ಇದನ್ನು ಕೇಂದ್ರ ಸರ್ಕಾರ ಅರಿಯಬೇಕಿದೆ. ಈ ವಿಷಯದ ಬಗ್ಗೆ ಮುಖ್ಯಮಂತ್ರಿಗಳು ಏನೇ ನಿರ್ಧಾರವನ್ನು ತೆಗೆದುಕೊಂಡರು ಸಹಾ ನಮ್ಮ ಸ್ವಾಗತ ಇದೆ. ಎಂದ ಸಚಿವರು, ಬಂಗಾರಪ್ಪರವರು ಅಂದು ತೆಗೆದುಕೊಂಡಿದ್ದ ನಿರ್ಧಾರ ಐತಿಹಾಸಿಕವಾಗಿತ್ತು ಅದ ಮೇಲೆ ರಾಜ್ಯದಲ್ಲಿ ಬಹಳಷ್ಟು ಮುಖ್ಯಮಂತ್ರಿಗಳು ಬಂದರು ಹೋದರು ಅಗ ನೀರನ್ನು ಬಿಟ್ಟರು ಮತ್ತೇ ಕೆಲವರು ನ್ಯಾಯಾಲಯದ ಮೊರೆ ಹೋದರು, ಇಂದು ಸಹಾ ಇದರ ಬಗ್ಗೆ ವಿಚಾರಣೆ ನಡೆಯುತ್ತಿದೆ. ನ್ಯಾಯಾಲಯದ ಬಂತರ ಮುಖ್ಯಮಂತ್ರಿಗಳು ನಿರ್ಧಾರ ತೆಗೆದುಕೊಳ್ಳುವ ಸಮಯ ಬಂದರೆ ನಾವು ಅವರ ಕೈಜೋಡಿಸುವುದಾಗಿ ಮಧು ಬಂಗಾರಪ್ಪ ತಿಳಿಸಿದರು.

ರಾಜ್ಯದಲ್ಲಿ ಶಿಕ್ಷಕರ ಕೂರತೆ ಇರುವ ಕಡೆಯಲ್ಲಿ ಖಾಯಂ ಶಿಕ್ಷಕರ ಬದಲು ಅತಿಥಿ ಶಿಕ್ಷಕರನ್ನು ನೀಡಲಾಗಿದೆ, ರಾಜ್ಯದಲ್ಲಿ 53 ಸಾವಿರ ಶಿಕ್ಷಕರ ಕೊರತೆ ಇತ್ತು ಇದರಲ್ಲಿ 43 ಸಾವಿರ ಶಿಕ್ಷಕರನ್ನು ನೀಡಲಾಗಿದೆ. 10.500 ಶಿಕ್ಷಕರು ಆದೇಶವನ್ನು ಕಾಯುತ್ತಿದ್ದಾರೆ ಇದನ್ನು ನೀಡಲು ನ್ಯಾಯಾಲಯದ ಆದೇಶ ಬೇಕಿದೆ. ಅದು ತೀರ್ಮಾನವಾದ ಮೇಲೆ ಆದೇಶವನ್ನು ನೀಡಲಾಗುವುದು. ಈಗ 125 ದಿನದಲ್ಲಿ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಂತೆ ವಿವಿಧ ರೀತಿಯ ನಿರ್ಣಯವನ್ನು ತೆಗೆದುಕೊಳ್ಳಲಾಗಿದೆ. ಮಕ್ಕಳಿಗೆ ಮೂರು ಸಲ ಪರೀಕ್ಷೆ ಪತ್ರ ಪರಿಷ್ಕರಣೆಯಂತಹ ಕೆಲಸವನ್ನು ಮಾಡಲಾಗಿದೆ ಇನ್ನು ಕೆಲವು ಬದಲಾವಣೆಯನ್ನು ಮಾಡಬೇಕಿದೆ ಅದಕ್ಕೆ ಕಾಲಾವಕಾಶ ಬೇಕಿದೆ ಎಂದರು.

ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಶೀಘ್ರವಾಗಿ ಹೆಚ್ಚಿನ ಪ್ರಮಾಣದಲ್ಲಿ ಸ್ಥಾಪನೆ ಮಾಡಲಾಗುವುದು. ತಕ್ಷಣ ಉತ್ತಮವಾದ ಶಾಲೆಗಳನ್ನು ನಿರ್ಮಾಣ ಮಾಡುವಂತೆ ಅಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದೆ ಅದರಂತೆ ಶಾಶ್ವತವಾದ ಕಾರ್ಯವನ್ನು ಮಾಡುವಂತೆ ತಿಳಿಸಲಾಗಿದೆ ಎಂದರು.

## ಫಾಸ್ಟ್ ನ್ಯೂಸ್

### ಸ್ಟಾಪ್ ಟೊಬ್ಯಾಕೋ ಮೊಬೈಲ್ ಆ್ಯಪ್ ಬಿಡುಗಡೆ

» ಚಿತ್ರದುರ್ಗ

ರಾಷ್ಟ್ರಿಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಸಾರ್ವಜನಿಕರ ಬಳಕೆಗಾಗಿ ಸ್ಟಾಪ್ ಟೊಬ್ಯಾಕೋ (Stoptobacco Mobile) ಮೊಬೈಲ್ ಆಪ್ ಬಿಡುಗಡೆ ಮಾಡಲಾಗಿದೆ. ಸಾರ್ವಜನಿಕರು ಈ ಮೊಬೈಲ್ ಆಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವವರ ವಿರುದ್ಧ ಈ ಮೊಬೈಲ್ ಆಪ್‌ನಲ್ಲಿ ದೂರುಗಳನ್ನು ಸಲ್ಲಿಸಬಹುದು. ಈ ದೂರುಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಪಡೆದು, ಸ್ಥಳ ಪರಿಶೀಲನೆ ಮಾಡಿ ಕಾಯ್ದೆಯನ್ನು ಉಲ್ಲಂಘನೆ ಮಾಡಿದವರಿಗೆ ಕ್ರಮಕೈಗೊಳ್ಳಲಾಗುವುದು. ಸಾರ್ವಜನಿಕರು ಕ್ಯೂ ಆರ್ ಕ್ಯೂಡ್ ಬಳಸಿ ಸ್ಟಾಪ್ ಟೊಬ್ಯಾಕೋ ಮೊಬೈಲ್ ಆಪ್ ಡೌನ್‌ಲೋಡ್ ಮಾಡಿಕೊಳ್ಳುವಂತೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಸ್ತ್ರಚಿಕಿತ್ಸಾ ಶಿಬಿರ

» ಚಿತ್ರದುರ್ಗ

ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆಸ್ಪತ್ರೆ ಚಿತ್ರದುರ್ಗ ಭಗವಾನ್ ಮಹಾವೀರ್ ಜೈನ್ ಆಸ್ಪತ್ರೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಸೆ. 25ರ ಬೆಳಿಗ್ಗೆ 10 ರಿಂದ 1 ರವರೆಗೆ ನಗರದ ಜಿಲ್ಲಾ ಆಸ್ಪತ್ರೆಯ ಬಿ.ಸಿ.ರಾಯ್ ಸಭಾಂಗಣದಲ್ಲಿ ಸೀಳು ತುಟಿ ಮತ್ತು ಸೀಳು ಅಂಗಳ ಪೀಡಿತರನ್ನು ಗುರುತಿಸುವುದು ಮತ್ತು ಉಚಿತ ಶಸ್ತ್ರಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

### ಸಿ.ಕೆ.ಸಂಧ್ಯಾಗೆ ಇಂದು ಚಿನ್ನದ ಪದಕ ಪ್ರಶಸ್ತಿ ಪ್ರದಾನ



» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಗೃಹರಕ್ಷಕದಳದ ಕಮಾಂಡೆಂಟ್ ಸಿ.ಕೆ.ಸಂಧ್ಯಾರವರಿಗೆ ಚಿನ್ನದ ಪದಕ ಪ್ರಶಸ್ತಿ ಲಭಿಸಿದೆ. ಗೃಹರಕ್ಷಕದಳ ಇಲ್ಲಿ ಸಲ್ಲಿಸಿದ ಉತ್ತಮ ಸೇವೆಯನ್ನು ಪರಿಗಣಿಸಿ ಸರ್ಕಾರ ಇವರನ್ನು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ, ಎಂದು ತಿಳಿಸಿದೆ. ಪ್ರಶಸ್ತಿಯನ್ನು ಬೆಂಗಳೂರಿನ ಜಯನಗರದ ಆರ್.ಎ.ಮುಂಡ್ಕರ್, ಅಗ್ನಿಶಾಮಕ ಅಕಾಡೆಮಿ ಸಭಾಂಗಣದಲ್ಲಿ 22 ರ ಶುಕ್ರವಾರ ನಡೆಯಲಿರುವ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿ.ಕೆ.ಸಂಧ್ಯಾರವರಿಗೆ ಚಿನ್ನದ ಪದಕ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಗೃಹರಕ್ಷಕ ದಳದ ಮಹಾ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದೀಕ್ಷಾ ಭೂಮಿ ಭೇಟಿ: ಅರ್ಜಿ ಆಹ್ವಾನ

ಚಿತ್ರದುರ್ಗ: ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮಹಾರಾಷ್ಟ್ರದ ನಾಗಪುರ ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ದೀಕ್ಷಾ ಭೂಮಿಗೆ ಭೇಟಿ ನೀಡುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯಾತ್ರಾರ್ಥಿಗಳು ಸಮಾಜ ಇಲಾಖೆ ವೆಬ್‌ಸೈಟ್ https://sw.kar.nic.in ನಲ್ಲಿ ಆನ್‌ಲೈನ್ ಮೂಲಕ ಸೆಪ್ಟೆಂಬರ್ 20 ರಿಂದ ಅಕ್ಟೋಬರ್ 10 ರವರೆಗೆ ಅರ್ಜಿ ಸಲ್ಲಿಸಬಹುದು ಎಂದು ಚಳ್ಳಕರೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅನಾಮಧೇಯ ಶವ ಪತ್ತೆ

ಚಿತ್ರದುರ್ಗ: ಹೊಳಲ್ಕೆರೆಯ ಸರ್ಕಾರಿ ಆಸ್ಪತ್ರೆಯಲ್ಲಿ ಸುಮಾರು 35 ರಿಂದ 40 ವರ್ಷದ ವ್ಯಕ್ತಿ ಮೃತಪಟ್ಟಿರುವ ಪ್ರಕರಣ ಸೆಪ್ಟೆಂಬರ್ 20 ರಂದು ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಮೃತ ಅನಾಮಧೇಯ ವ್ಯಕ್ತಿಯ ಚಹರೆ ಇಂತಿದೆ. 35-40ವರ್ಷ, ಸುಮಾರು 5.10 ಅಡಿ ಎತ್ತರ, ಸಣಕಲು ಮೈಕಟ್ಟು, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ಬಲಗೈಯಲ್ಲಿ ಅಮ್ಮ, ಗಂಗಮ್ಮ, ಪಿ ಗೌರಿ ಎಂಬ ಹಚ್ಚೆಗಳು ಇರುತ್ತವೆ, ಈ ಮೇಲ್ಕಂಡ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ದೂರವಾಣಿ ಸಂಖ್ಯೆ ಹೊಳಲ್ಕೆರೆ ಪೊಲೀಸ್ ಠಾಣೆ 08191-275233, ಹೊಳಲ್ಕೆರೆ ವೃತ್ತ ನಿರಿಕ್ಷಕರವರ ಕಚೇರಿ, 08191-275376, ಉಪಾಧೀಕ್ಷಕರ ಕಚೇರಿ, 08194-2224304, ಕಂಟ್ರೋಲ್ ರೂಂ, 08194-222782 ಗೆ ಸಂಪರ್ಕಿಸಿ.

---

ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಕಾರ್ಯಾಗಾರದಲ್ಲಿ ನ್ಯಾ. ಬಿ.ಎಸ್.ರೇಖಾ ಹೇಳಿಕೆ

# ಬಾಲ್ಯವಿವಾಹ ನಿರ್ಮೂಲನೆಗೆ ಕಳಕಳಿ ಅಗತ್ಯ

» ಚಿತ್ರದುರ್ಗ

ದೇಶದಲ್ಲಿ ಬಾಲ್ಯ ವಿವಾಹ ದಂತಹ ಸಾಮಾಜಿಕ ಪಿಡುಗುಗಳ ನಿರ್ಮೂಲನೆಗೆ ಸಾಮಾಜಿಕ ಕಳಕಳಿ ಹಾಗೂ ಇಲಾಖೆಗಳ ನಡುವೆ ಸಮನ್ವಯತೆ ಅಗತ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ರೇಖಾ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಹಿರಿಯೂರು ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಪೋಕ್ಸೊ ಕಾಯ್ದೆ ಮತ್ತು ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಬಾಲ್ಯ ವಿವಾಹ ನಿಷೇದಾಧಿಕಾರಿಗಳಿಗೆ ಹಿರಿಯೂರಿನ ವಾಲ್ಮೀಕಿ ಸಮುದಾಯ ಭವನದಲ್ಲಿ ಗುರುವಾರ ಆಯೋಜಿಸಿದ್ದ ಒಂದು ದಿನದ ಕಾರ್ಯಗಾರ ಹಾಗೂ ರಾಷ್ಟ್ರೀಯ ಪೋಷಣ್ ಅಭಿಯಾನದಡಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಬಾಲ್ಯವಿವಾಹ ಪ್ರಕರಣಗಳು ವ್ಯಾಪಕವಾಗಿ ನಡೆಯುತ್ತಿದ್ದು, ಸಮಾಜಕ್ಕೆ ಇದೊಂದು ಪಿಡುಗಾಗಿದೆ. ಇಂತಹ ಸಾಮಾಜಿಕ ಪಿಡುಗುಗಳನ್ನು ತಡೆಯಲು ಸಂಬಂಧಿಸಿದ ಎಲ್ಲಾ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಬೇಕು. ಬಾಲ್ಯ ವಿವಾಹ ಪ್ರಕರಣಗಳು ವರದಿಯಾದಾಗ ನಿಜಕ್ಕೂ ಬೇಸರವೆನಿಸುತ್ತದೆ. ಸಮಾಜದ ಎಲ್ಲಾ ರೀತಿಯ ಪಿಡುಗುಗಳನ್ನು ತೊಲಗಿಸಲು ಎಲ್ಲರೂ ಸಾಮಾಜಿಕ ಕಳಕಳಿ ಹೊಂದಿರಬೇಕು ಎಂದರು.

ಪ್ರಸಕ್ತ ದಿನಮಾನದಲ್ಲಿ ಹೆಣ್ಣು ಮಕ್ಕಳು ಎಲ್ಲ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ, ಹೆಣ್ಣು ಮಕ್ಕಳು ಅಬಲೆಯರಲ್ಲ ಸಬಲೆಯರು ಎಂಬುದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಬಾಲ್ಯ ವಿವಾಹ ಜರುಗಲು ಅವಕಾಶ ಮಾಡಿಕೊಡಬಾರದು. ಬಾಲ್ಯವಿವಾಹದಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಪೋಷಕರಿಗೆ ಅರಿವು ಇರಬೇಕು, ಹೆಣ್ಣು ಮಕ್ಕಳು ಸ್ವಲ್ಪ ವಯಸ್ಸಿಗೆ ಬಂದಾಕ್ಷಣ ಮದುವೆ ಮಾಡಿಕೊಟ್ಟು ಕೈತೊಳೆದುಕೊಳ್ಳುವುದಲ್ಲ, ಮಗುವಿನ ಬಾಲ್ಯವನ್ನು ಪೋಷಕರು ಹಾಳು ಮಾಡಬಾರದು. ಅವರಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಸಾಧನೆಗೆ ಅವಕಾಶ ಕಲ್ಪಿಸಿಕೊಡಬೇಕು. ಅವರು ಪ್ರೌಢಾವಸ್ಥೆಗೆ ಬರುವವರೆಗೂ ಕಾಯಬೇಕು. ಆನಂತರ ಮದುವೆ ಮಾಡಬೇಕು ಎಂದು ನ್ಯಾಯಾಧೀಶರಾದ ಬಿ.ಎಸ್. ರೇಖಾ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯಾಗಿರುವ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್ ಮಾತನಾಡಿ, ಜಿಲ್ಲೆಯಲ್ಲಿ ಬಾಲ್ಯವಿವಾಹಗಳು ಆಗುವುದನ್ನು ತಡೆಗಟ್ಟಬೇಕು, ಬಾಲ್ಯವಿವಾಹಗಳು ಜರುಗುವುದು ಇದಕ್ಕೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯ ಎತ್ತಿ ತೋರುತ್ತದೆ.

ಈ ಬಗ್ಗೆ ಅಧಿಕಾರಿಗಳು ಆತ್ಮಾವಲೋಕನ ಮಾಡಿಕೊಳ್ಳಬೇಕು. ಕಳೆದ ಶೈಕ್ಷಣಿಕ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶದಲ್ಲಿ ಜಿಲ್ಲೆಯು ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿದ ರೀತಿಯೇ, ಬಾಲ್ಯ ವಿವಾಹ ತಡೆಗಟ್ಟುವಲ್ಲಿಯೂ ಸಾಧನೆ ತೋರಲು ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಕಾಳಜಿಯಿಂದ ಕೆಲಸ ಮಾಡಬೇಕು ಎಂದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಸ್.ಜೆ.ಕುಮಾರಸ್ವಾಮಿ ಮಾತನಾಡಿ, ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾನೂನಿನಲ್ಲಿ ಅತ್ಯಂತ ಕಠಿಣ ಶಿಕ್ಷೆ ಇದೆ. ಇಡೀ ಸಮಾಜದ ಎಲ್ಲರೂ ಮಕ್ಕಳ ಹಕ್ಕುಗಳನ್ನು ರಕ್ಷಣೆ ಮಾಡಬೇಕು. ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯ ತಡೆಗಟ್ಟುವುದು ಎಲ್ಲರ ಕರ್ತವ್ಯವಾಗಿದೆ. ಪೋಕ್ಸೊ ಕಾಯಿದೆ ಮತ್ತು ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಮಹಿಳಾಮತ್ತುಮಕ್ಕಳಅಭಿವೃದ್ಧಿಇಲಾಖೆ ಉಪನಿರ್ದೇಶಕಿ ಭಾರತಿ ಆರ್. ಬಣಕಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಹಿರಿಯೂರಿನ ಹಿರಿಯ ಸಿವಿಲ್ ನ್ಯಾಯಾಧೀಶ ಮೊಹಮ್ಮದ್ ಮೊಯಿನುದ್ದಿನ್, ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಧೀಶರಾದ ಶಿಲ್ಪ ತಿಮ್ಮಾಪುರ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಕೆ.ಟಿ.ತಿಪ್ಪೇಸ್ವಾಮಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಆರ್.ಪ್ರಭಾಕರ, ಹಿರಿಯೂರು ವಕೀಲರ ಸಂಘದ ಅಧ್ಯಕ್ಷ ರಂಗೇನಹಳ್ಳಿ ರಾಮಚಂದ್ರಪ್ಪ, ಉಪಾಧ್ಯಕ್ಷೆ ಎಚ್.ಬೀನಾರಾಣಿ, ಕಾರ್ಯದರ್ಶಿ ಜಿ.ಚಿತ್ರಲಿಂಗಪ್ಪ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್‌ರೆಡ್ಡಿ, ಪೊಲೀಸ್ ಉಪ ಅಧೀಕ್ಷಕಿ ಎಸ್.ಚೈತ್ರ, ಬಾಲ ನ್ಯಾಯ ಮಂಡಳಿ ಸದಸ್ಯೆ ಸುಮನ ಎಸ್ ಅಂಗಡಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಮತ್ತಿತರರು ಉಪಸ್ಥಿತರಿದ್ದರು. ಬೆಂಗಳೂರಿನ ಪೊಲೀಸ್ ತರಬೇತಿ ಕಾರ್ಯಾಲಯದ ತರಬೇತುದಾರ ಸಿ.ಜೆ.ಲೋಹಿತ್ ಉಪನ್ಯಾಸ ನೀಡಿದರು.

---

# ಮಹಿಳಾ ಮೀಸಲು ಹೆಚ್ಚಳ: ಸಿಹಿ ಹಂಚಿದ ಬಿಜೆಪಿ

» ಚಿತ್ರದುರ್ಗ

ದೇಶದ ಪ್ರಧಾನಿ ನರೇಂದ್ರಮೋದಿ ಮಹಿಳೆಯರಿಗೆ ರಾಜಕೀಯದಲ್ಲಿ ಶೇ.33 ರಷ್ಟು ಮೀಸಲಾತಿಯನ್ನು ಜಾರಿಗೊಳಿಸಿ ಲೋಕಸಭೆಯಲ್ಲಿ ಮಸೂದೆ ಮಂಡಿಸಿರುವುದಕ್ಕೆ ಬಿಜೆಪಿ. ನಗರ ಮಹಿಳಾ ಮೋರ್ಚಾದಿಂದ ಹೊಳಲ್ಕೆರೆ ರಸ್ತೆಯಲ್ಲಿ ಗುರುವಾರ ಸಂಭ್ರಮ ಆಚರಿಸಿ ಸಿಹಿ ವಿತರಿಸಲಾಯಿತು.

ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ ಮಾತನಾಡಿ ರಾಜಕೀಯದಲ್ಲಿ ಮಹಿಳೆಗೆ ಶೇ.33 ರಷ್ಟು ಮೀಸಲಾತಿ ಕೊಡುವ ಮಸೂದೆ ಮಂಡಿಸಿರುವ ಪ್ರಧಾನಿ ನರೇಂದ್ರಮೋದಿರವರು ಒಂಬತ್ತು ವರ್ಷಗಳ ತಮ್ಮ ಅಧಿಕಾರವಧಿಯಲ್ಲಿ ಮಹಿಳಾ ಸಬಲೀರಕರಣಕ್ಕಾಗಿ ಜಾರಿಗೆ ತಂದಿರುವ ಅನೇಕ ಉಪಯುಕ್ತ ಯೋಜನೆಗಳನ್ನು ಪ್ರತಿ ಮನೆ ಮನೆಗೆ ಮುಟ್ಟಿಸುವ ಕೆಲಸವಾಗಬೇಕು. ಉಜ್ವಲ್ ಯೋಜನೆಯಡಿ ಬಡ ಮಹಿಳೆಯರಿಗೆ ಗ್ಯಾಸ್ ಸಿಲಿಂಡರ್ ವಿತರಿಸಿರುವುದರ ಜೊತೆಗೆ ಆಕಸ್ಮಿಕವಾಗಿ ಏನಾದರೂ ಅಪಘಾತವಾದರೆ ಎರಡು ಲಕ್ಷ ರೂ.ಗಳ ಜೀವವಿಮ ಬಾಂಡ್ ನೀಡಿದ್ದಾರೆ. ಮಾತೃ ವಂದನಾ, ಭಾಗ್ಯಲಕ್ಷ್ಮಿ, ಪ್ರೌಢಶಾಲಾ ಮಕ್ಕಳಿಗೆ ಸೈಕಲ್, ಪ್ರತಿಯೊಬ್ಬರಿಗೂ ಶುದ್ದ ನೀರು ಕುಡಿಯಲಿ ಎಂದು ಆರ್.ಓ. ಫಿಲ್ಟರ್, ಜಲಜೀವನ್ ಮಿಷನ್, ಜನಧನ್ ಖಾತೆ, ಕೋವಿಡ್‌ನಲ್ಲಿ ಪ್ರತಿ ತಿಂಗಳು ಮಹಿಳೆಯರ ಬ್ಯಾಂಕ್ ಖಾತೆಗೆ ಐದು ನೂರು ರೂ. ಇಷ್ಟೆಲ್ಲಾ ಮಹಿಳೆಯರಿಗೆ ಸೌಲಭ್ಯ ಕಲ್ಪಿಸಿರುವ ಪ್ರಧಾನಿ ಮೋದಿ ರಾಜಕೀಯವಾಗಿ ಶಕ್ತಿ ತುಂಬುವುದಕ್ಕಾಗಿ ಶೇ.33 ಮೀಸಲಾತಿ ಮಸೂದೆ ಮಂಡಿಸಿರುವುದರಿಂದ ರಾಜ್ಯ ವಿಧಾನಸಭೆಯಲ್ಲಿ 68 ಮಹಿಳೆಯರು ಶಾಸಕರಾಗಬಹುದು ಎಂದು ಗುಣಗಾನ ಮಾಡಿದರು.



ಬಿಜೆಪಿ. ನಗರ ಮಹಿಳಾ ಮೋರ್ಚಾ ಅಧ್ಯಕ್ಷೆ ಶೀಲ ಶ್ರೀನಿವಾಸ್ ಮಾತನಾಡಿ ದೇಶದ ಪ್ರಧಾನಿ ನರೇಂದ್ರಮೋದಿರವರು ಮಹಿಳೆಯರಿಗೆ ರಾಜಕೀಯವಾಗಿ ಶೇ.33 ಪರ್ಸೆಂಟ್ ಘೋಷಿಸಿ ಮಸೂಸೆ ಮಂಡಿಸಿರುವುದರಿಂದ ಮಹಿಳೆಯರಿಗೆ ಬಲ ಬಂದಂತಾಗಿದೆ. ಇದರಿಂದ ಮಹಿಳೆ ಕೇವಲ ಅಡುಗೆ ಮನೆಗೆ ಮೀಸಲಲ್ಲ. ಎಲ್ಲಾ ರಂಗದಲ್ಲಿಯೂ ಮುಂದೆ ಬರಲು ನೆರವಾಗಲಿದೆ ಎಂದು ಹೇಳಿದರು.

ಬಿಜೆಪಿ. ಎಸ್ಸಿ. ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯೆ ಭಾರ್ಗವಿ ದ್ರಾವಿಡ್ ಮಾತನಾಡಿ ಹನ್ನೆರಡನೇ ಶತಮಾನದ ಕ್ರಾಂತಿಕಾರಿ ಬಸವಣ್ಣ ಹಾಗೂ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಆಶಯಗಳನ್ನು ಎತ್ತಿಹಿಡಿದಿರುವ ದೇಶದ ಪ್ರಧಾನಿ ನರೇಂದ್ರಮೋದಿ ರಾಜಕೀಯದಲ್ಲಿ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿಯನ್ನು ಘೋಷಿಸಿ ಮಸೂದೆ ಮೂಲಕ ಜಾರಿಗೊಳಿಸಿ ಹೆಣ್ಣು ಮನೆಗಷ್ಟೇ ಸೀಮಿತಳಲ್ಲ ಎಲ್ಲಾ ರಂಗಗಳಲ್ಲಿಯೂ ಪುರುಷರಿಗೆ ಸಮಾನವಾಗಿ ಬೆಳೆಯಬಹುದು ಎನ್ನುವುದನ್ನು ತೋರಿಸಿದ್ದಾರೆಂದು ಹರ್ಷ ವ್ಯಕ್ತಪಡಿಸಿದರು.

ಬಿಜೆಪಿ.ನಗರಮಹಿಳಾಮೋರ್ಚಾಗ್ರಾಮಾಂತರ ಅಧ್ಯಕ್ಷೆ ವೀಣ, ಪ್ರಧಾನ ಕಾರ್ಯದರ್ಶಿಗಳಾದ ರಾಜೇಶ್ವರಿ, ಅರುಣ, ಕಾರ್ಯದರ್ಶಿ ಶ್ರೀದೇವಿ, ಪದಾಧಿಕಾರಿಗಳಾದ ಸರಸ್ವತಿ, ಚಂದ್ರಕಲಾ, ಶ್ರೀಕಾಂತಮ್ಮ, ಉಮಾದೇವಿ, ಚಂದ್ರಮ್ಮ, ರಾಣಿ, ಸುಧ, ನಗರಸಭೆ ಸದಸ್ಯೆ ಭಾಗ್ಯಮ್ಮ, ಬಿಜೆಪಿ. ಜಿಲ್ಲಾ ಉಪಾಧ್ಯಕ್ಷ ಸಂಪತ್‌ಕುಮಾರ್, ನಗರ ಮೋರ್ಚಾ ಕಾರ್ಯದರ್ಶಿ ಕಿರಣ್, ಸಮಾಜ ಸೇವಕ ಎನ್.ಕೆ.ಪ್ರಸಾದ್‌ಬಾಬು ಈ ಸಂದರ್ಭದಲ್ಲಿ ಹಾಜರಿದ್ದರು.

---

# ಭದ್ರಾ: ಆನ್ ಅಂಡ್ ಆಫ್‌ನಲ್ಲಿ ಮುಂಗಾರು ಹಂಗಾಮಿಗೆ ನೀರು



» ದಾವಣಗೆರೆ

ಭದ್ರಾ ಜಲಾಶಯದಿಂದ ಅಚ್ಚುಕಟ್ಟು ಪ್ರದೇಶದ ನೀರಾವರಿ ಬೆಳೆಗಳಿಗೆ ಮುಂಗಾರು ಹಂಗಾಮಿನಲ್ಲಿ ಬರದ ಹಿನ್ನಲೆಯಲ್ಲಿ ಆನ್ ಅಂಡ್ ಆಫ್ ವ್ಯವಸ್ಥೆಯಲ್ಲಿ ಕಾಲುವೆಗಳಿಗೆ ನೀರು ಬಿಡಲಾಗುತ್ತಿದ್ದು ಇದರಿಂದ ತೊಂದರೆಯಾಗಿದೆ ಎಂದು ಪ್ರತಿಭಟನೆ ಮಾಡಿದ ರೈತರೊಂದಿಗೆ ಗುರುವಾರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಸುಧೀರ್ಘ ಸಭೆ ನಡೆಸಿದರು.

ನೀರಾವರಿ ನಿಗಮದಿಂದ ನೀಡಿದ ಸಲಹೆಯನ್ನಾಧರಿಸಿ ಈ ವರ್ಷದ ಮಳೆಗಾಲದಲ್ಲಿ ಅಚ್ಚುಕಟ್ಟು ಪ್ರದೇಶದಲ್ಲಿ ಭತ್ತ ಬೆಳೆಯಲು ರೈತರು ಮುಂದಾಗಿದ್ದಾರೆ. ಆದರೆ ಸೆಪ್ಟೆಂಬರ್ 6 ರಂದು ನಡೆದ ಕಾಡಾ ಸಭೆಯಲ್ಲಿ ಮಳೆ ಕೊರತೆಯಿಂದ ಜಲಾಶಯದಲ್ಲಿನ ನೀರಿನ ಸಂಗ್ರಹದ ಕೊರತೆಯಿಂದ ಮುಂಗಾರು ಹಂಗಾಮಿನಲ್ಲಿ ಆನ್ ಅಂಡ್ ಆಫ್ ವ್ಯವಸ್ಥೆಯಲ್ಲಿ ಎಡ, ಬಲದಂಡೆ ಕಾಲುವೆಗಳಿಗೆ ನೀರು ಬಿಡಲು ಸಲಹಾ ಸಮಿತಿ ಸಭೆಯಲ್ಲಿ ತೀರ್ಮಾನ ಮಾಡಿ ನೀರು ಬಿಡಲಾಗುತ್ತಿದ್ದು ಕಳೆದ ನಾಲ್ಕು ದಿನಗಳಿಂದ ಕಾಲುವೆಗಳಿಗೆ ನೀರು ಹರಿಸುವುದನ್ನು ನಿಲ್ಲಿಸಲಾಗಿದೆ. ಇದರಿಂದ ಭತ್ತದ ಬೆಳೆಯು ವಡೆಯ ಹಂತದಲ್ಲಿದ್ದರಿಂದ ಈ ಅವಧಿಯಲ್ಲಿ ನೀರು ಬಿಡಬೇಕಾಗಿರುವುದು ಮಹತ್ವವುಳ್ಳದ್ದಾಗಿದೆ ಎಂದು ರೈತರ ಮನವಿಯಾಗಿರುತ್ತದೆ.

ಪ್ರತಿ ಎಕರೆಗೆ ಭತ್ತಾ ನಾಟಿಗೆ ಕನಿಷ್ಠ ರೂ.30 ಸಾವಿರ ವೆಚ್ಚ ಮಾಡಲಾಗಿದ್ದು ನೀರಾವರಿ ಇಲಾಖೆಯ ಸಲಹೆ ಮೇರೆಗೆ ಭತ್ತ ನಾಟಿ ಮಾಡಲಾಗಿದೆ. ಜಲಾಶಯದಲ್ಲಿ ಕುಡಿಯುವ, ಕೈಗಾರಿಕೆ ಉದ್ದೇಶ ಮತ್ತು ಡೆಡ್ ಸ್ಟೋರೇಜ್ ಹೊರತುಪಡಿಸಿ ನೀರಾವರಿಗೆ 22.89 ಟಿಎಂಸಿ ಲಭ್ಯವಿದ್ದು ಮುಂದಿನ 60 ದಿನಗಳಲ್ಲಿ ನಿರಂತರವಾಗಿ ನೀರು ಹರಿಸಿದರೆ, ಭತ್ತದ ಬೆಳೆ ರೈತರ ಕೈಗೆ ಸಿಗಲಿದೆ. ಭತ್ತದ ಬೆಳೆ ಬಾರದಿದ್ದಲ್ಲಿ ಆರ್ಥಿಕ ನಷ್ಟ ಮತ್ತು ಮೇವಿನ ಕೊರತೆಯಾಗಲಿದ್ದು ತಕ್ಷಣವೇ ಕಾಲುವೆಗಳಿಗೆ ನೀರು ಹರಿಸಬೇಕೆಂದು ದಾವಣಗೆರೆ, ಹರಿಹರ, ಮಲೆಬೆನ್ನೂರು ಭಾಗದ ರೈತರು ಆಗ್ರಹಿಸಿದರು. ಆನ್ ಅಂಡ್ ಆಫ್ ವ್ಯವಸ್ಥೆಯಡಿ ನೀರು ಬಿಡುವುದರಿಂದ ಜಲಾಶಯದಿಂದ ಕಾಲುವೆಗೆ ನೀರು ಹರಿಸಿದಾಗ ಕೊನೆಯ ಭಾಗದ ರೈತರಿಗೆ ಅದು ತಲುಪಲು ಕನಿಷ್ಠ 15 ದಿನಗಳು ಬೇಕಾಗುತ್ತದೆ ಎಂದರು.

---

### ಕನ್ನಡ ಸಂಸ್ಕೃತಿಯನ್ನು ಬಿಂಬಿಸುವ ಲಾಂಚನ ಮಾದರಿಗಳಿಗೆ ಆಹ್ವಾನ

ದಾವಣಗೆರೆ; ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿ 50 ವರ್ಷ ಪೂರ್ಣಗೊಳ್ಳಲಿರುವ ಅಂಗವಾಗಿ ಕರ್ನಾಟಕ ಸಂಭ್ರಮ 50, ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಎಂಬ ಶೀರ್ಷಿಕೆಯಡಿ ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಬಿಂಬಿಸುವ ವಿಶಿಷ್ಟವಾದ ಲಾಂಚನ(ಲೋಗೋ) ಮಾದರಿಗಳನ್ನು ಆಹ್ವಾನಿಸಲಾಗಿದೆ. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ https://kannadasiri.karnataka.gov.in ಸಂಪರ್ಕಿಸಬಹುದಾಗಿದೆ.

---

## ಪ್ರಮುಖ ಸುದ್ದಿ

# ಪಿಜಿಸಿಇಟಿ; ಪಾರದರ್ಶಕವಾಗಿ ನಡೆಸಲು ಎಡಿಸಿ ಸೂಚನೆ

» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಎಂ.ಸಿ.ಎ ಮತ್ತು ಎಂ.ಬಿ.ಎ ಕೋರ್ಸ್‌ಗಳ ಪ್ರವೇಶಾತಿಯ ಪಿಜಿಸಿಇಟಿ ಸಾಮಾನ್ಯ ಸಾಮರ್ಥ್ಯ ಪ್ರವೇಶ ಪರೀಕ್ಷೆಯು ಸೆ.24 ರಂದು ನಗರದ 5 ಕೇಂದ್ರಗಳಲ್ಲಿ ನಡೆಯಲಿದ್ದು, ಯಾವುದೇ ಲೋಪ ದೋಷಗಳಾಗದಂತೆ ಪರೀಕ್ಷೆ ನಡೆಸಲು ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್ ತಿಳಿಸಿದರು.



ಗುರುವಾರ ಜಿಲ್ಲಾಡಳಿತ ಭವನದ ಅಪರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೆಪ್ಟೆಂಬರ್ 24 ರಂದು ನಡೆಯಲಿರುವ ಎಂ.ಸಿ.ಎ ಮತ್ತು ಎಂ.ಬಿ.ಎ ಕೋರ್ಸ್‌ಗಳ ಪ್ರವೇಶಾತಿಯ ಸಾಮಾನ್ಯ ಸಾಮರ್ಥ್ಯ ಪ್ರವೇಶ ಪರೀಕ್ಷೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಎಂ.ಸಿ.ಎ ಮತ್ತು ಎಂ.ಬಿ.ಎ ಕೋರ್ಸ್‌ಗಳ ಪ್ರವೇಶಾತಿಯ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು 3547 ಅಭ್ಯರ್ಥಿಗಳು ಬರೆಯಲಿದ್ದು, ನಗರದ ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು, ರಾಜನಹಳ್ಳಿ ಸೀತಮ್ಮ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಅಥಣಿ ಪಿ.ಯು ಕಾಲೇಜು ಮತ್ತು ಸೆಂಟ್ ಪಾಲ್ಸ್ ಪಿ.ಯು ಕಾಲೇಜು ಸೇರಿ ಒಟ್ಟು 5 ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ ಎಂದರು.

ಎಂ.ಸಿ.ಎ ಕೋರ್ಸ್‌ಗೆ ಸಂಬಂಧಿಸಿದ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಹಾಗೂ ಎಂ.ಬಿ.ಎ ಕೋರ್ಸ್‌ಗೆ ಸಂಬಂಧಿಸಿದ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯು ಮಧ್ಯಾಹ್ನ 2.30 ರಿಂದ 4.30 ರವರೆಗೆ ನಡೆಯಲಿದ್ದು ಪರೀಕ್ಷಾ ಕೇಂದ್ರಗಳಿಗೆ ನೇಮಿಸಿದ ಅಧಿಕಾರಿಗಳು ನಿಗಧಿತ ಸಮಯದಲ್ಲಿ ಹಾಜರಾಗಿ ಪರೀಕ್ಷಾ ಕಾರ್ಯ ಮುಗಿಯುವವರೆಗೂ ಕೇಂದ್ರಲ್ಲಿದ್ದು, ಪರೀಕ್ಷೆ ಬಗ್ಗೆ ಸಂಕ್ಷಿಪ್ತವಾದ ವರದಿ ನೀಡಬೇಕು.

ಪರೀಕ್ಷೆಗೆ ನಿಯೋಜಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳು ಅಭ್ಯರ್ಥಿಗಳ ವರ್ತನೆಗಳನ್ನು ಗಮನಿಸಿ ಎಚ್ಚರಿಕೆಯಿಂದ ಹಾಗೂ ಪಾರದರ್ಶಕವಾಗಿ ಪರೀಕ್ಷೆ ನಡೆಸಬೇಕು. ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಪರೀಕ್ಷಾ ಅವಧಿಯಲ್ಲಿ 200 ಮೀಟರ್ ವ್ಯಾಪ್ತಿ ಪ್ರದೇಶವನ್ನು ಸಾರ್ವಜನಿಕ ಪ್ರವೇಶಕ್ಕೆ ನಿಷೇಧಿಸಲಾಗಿದೆ. ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳು ಮತ್ತು ಸೈಬರ್ ಕೆಫೆಗಳನ್ನು ಪರೀಕ್ಷಾ ಅವಧಿಯಲ್ಲಿ ತೆರೆಯದಂತೆ ಪೊಲೀಸ್ ಇಲಾಖೆ ಕ್ರಮ ವಹಿಸಬೇಕು. ಪರೀಕ್ಷಾರ್ಥಿಗಳು ಪರೀಕ್ಷಾ ಕೊಠಡಿಗೆ ಮೊಬೈಲ್, ಕ್ಯಾಲ್ಕುಲೇಟರ್ ಇನ್ನಿತರೆ ಎಲೆಕ್ಟ್ರಾನಿಕ್ ಸಲಕರಣೆಗಳೊಂದಿಗೆ ಹಾಜರಾಗದಂತೆ ಕಟ್ಟೆಚ್ಚರ ವಹಿಸಬೇಕು ಎಂದರು. ಡಿ.ಡಿ.ಪಿ.ಐ ಕೊಟ್ರೇಶ್, ಡಿ.ಡಿ.ಪಿ.ಯು ಅಧಿಕಾರಿ ಕರಿಬಸಪ್ಪ, ಬಿ.ಇ.ಓ ಶೇರ್‌ಆಲಿ ಹಾಗೂ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಪಿ. ರಮೇಶ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T